ಸಂಪುಟ : 10 ಸಂಚಿಕೆ 5 ಪುಟ : 4+2 ಬೆಲೆ: 3.00 ಗುರುವಾರ ಜನವರಿ 30 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 5 Pages : 4+2 Price : 3.00 Thursday January 30 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




**ಕುಂಭಮೇಳದಲ್ಲಿ ಕಾಲ್ತುಳಿತ ಪ್ರಕರಣ**

## 30 ಭಕ್ತರು ದುರ್ಮರಣ, 60ಕ್ಕೂ ಹೆಚ್ಚು ಜನರಿಗೆ ಗಾಯ!



■ ವಿಜಯಸಾಕ್ಷಿ ಸುದ್ದಿ, ಪ್ರಯಾಗ್‌ರಾಜ್

ಮಹಾ ಕುಂಭಮೇಳದಲ್ಲಿ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ 30 ಭಕ್ತರು ದುರ್ಮರಣ ಹೊಂದಿದ್ದು, 60ಕ್ಕೂ ಹೆಚ್ಚು ಜನರಿಗೆ ಗಾಯವಾಗಿದೆ ಎಂದು ವರದಿಯಾಗಿದೆ.

ಈ ಸಂಬಂಧ ಪೊಲೀಸ್ ಅಧಿಕಾರಿ ವೈಭವ್ ಕೃಷ್ಣ ಮಾತನಾಡಿ, ಉತ್ತರ ಪ್ರದೇಶದ ಪ್ರಯಾಗರಾಜ್‌ನ ಮಹಾಕುಂಭ ಸ್ಥಳದಲ್ಲಿ ಬುಧವಾರ ಬೆಳಗಿನ ಜಾವ ಸಂಭವಿಸಿದ ಕಾಲ್ತುಳಿತದಲ್ಲಿ 30 ಜನರು ಸಾವನ್ನಪ್ಪಿದ್ದಾರೆ. 25 ಶವಗಳನ್ನು ಗುರುತಿಸಲಾಗಿದೆ. ಕಾಲ್ತುಳಿತದಿಂದ 60 ಮಂದಿ ಗಾಯಗೊಂಡಿದ್ದಾರೆ. ಹಲವರು ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾರೆ ಎಂದರು.

ಇನ್ನೂ ಅತ್ಯಂತ ಮಂಗಳಕರ ದಿನಗಳಲ್ಲಿ ಒಂದಾದ ಮೌನಿ ಅಮಾವಾಸ್ಯೆಯ ಸಂದರ್ಭದಲ್ಲಿ ಪವಿತ್ರ ಸ್ನಾನ ಮಾಡಲು ಅನೇಕ ಯಾತ್ರಾರ್ಥಿಗಳ ನಡುವೆ ಜಾಗಕ್ಕಾಗಿ ಮಹಾ ಕುಂಭದ ಸಂಗಮ್ ಪ್ರದೇಶದಲ್ಲಿ ಮುಂಜಾನೆ ನೂಕುನುಗ್ಗಲು ಉಂಟಾಗಿದೆ. ಕಾಲ್ತುಳಿತ ಸಂಭವಿಸುವ ಮೊದಲು ಅನೇಕ ಜನರು ಬ್ಯಾರಿಕೇಡ್‌ಗಳನ್ನು ಒಡೆದು ನುಗ್ಗಿದ್ದಾರೆ. ಪರಿಣಾಮವಾಗಿ ಸಾವು-ನೋವುಗಳಾಗಿವೆ.

**'ವಿಪತ್ತು ನಿರ್ವಹಣಾ ಅಣುಕು ಪ್ರದರ್ಶನ'ದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ**

# ಗ್ಯಾಸ್ ಸೋರಿಕೆಯ ಅರಿವು ಮೂಡಿಸುವುದು ಅವಶ್ಯ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಸಾರ್ವಜನಿಕರಿಗೆ ಗ್ಯಾಸ್ ಸೋರಿಕೆ ಬಗ್ಗೆ ಅರಿವು ಮೂಡಿಸುವುದು ಅವಶ್ಯವಾಗಿದೆ ಎಂದು ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳಾದ ದಿವ್ಯಪ್ರಭು ಜಿ.ಆರ್.ಜೆ ಹೇಳಿದರು.

ಬುಧವಾರ ಶಲವಡಿಯ ಜಿಎಐಎಲ್ (ನ್ಯಾಚುರಲ್ ಗ್ಯಾಸ್ ಟ್ರಾನ್ಸಮಿಷನ್ ಕಂಪನಿ) ಇಂಡಿಯಾ ಲಿಮಿಟೆಡ್ ಮುಂಭಾಗದಲ್ಲಿ ಧಾರವಾಡ ಜಿಲ್ಲೆಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಹಯೋಗದೊಂದಿಗೆ ಜಿಎಐಎಲ್ ಇಂಡಿಯಾ ಲಿಮಿಟೆಡ್ ವತಿಯಿಂದ ವಿಪತ್ತು ನಿರ್ವಹಣೆ ಅಣುಕು ಪ್ರದರ್ಶನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜಿಎಐಎಲ್ ಇಂಡಿಯಾ ಲಿ ವತಿಯಿಂದ ಪ್ರತಿ ವರ್ಷ ಗ್ಯಾಸ್ ಸೋರಿಕೆ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ಅದರಂತೆ ಈ ವರ್ಷ ಶಲವಡಿ ಗ್ರಾಮದಲ್ಲಿ ಅಣುಕು ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದೆ. ಗ್ಯಾಸ್ ಸೋರಿಕೆಯಾದಾಗ ಜನರು ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಬೇಕು ಎಂಬುದರ ಕುರಿತು ಜಾಗೃತಿ ಮೂಡಿಸಬೇಕಿದೆ. ಯಾವುದೇ ರೀತಿಯ ಜೀವ ಹಾನಿ ಹಾಗೂ ಆಸ್ತಿ ಹಾನಿ ಆಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಮಿತಿಯಲ್ಲಿ ಪೊಲೀಸ್ ಇಲಾಖೆ, ಅಗ್ನಿಶಾಮಕ ಇಲಾಖೆ, ಆರೋಗ್ಯ ಇಲಾಖೆ ಸೇರಿದಂತೆ ಸ್ಥಳೀಯ ಸಂಸ್ಥೆಗಳನ್ನು ಒಳಗೊಂಡಿರುತ್ತವೆ ಎಂದರು.



ಅಣುಕು ಪ್ರದರ್ಶನದ ಕುರಿತು ಜನರು ಹಾಗೂ ಸ್ಥಳೀಯ ಅಧಿಕಾರಿಗಳಿಗೆ ಮಾಹಿತಿ ನೀಡಬೇಕಾಗುತ್ತದೆ. ಅಲ್ಲದೇ ಅವಘಡ ನಡೆದಾಗ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಬೇಕು ಎಂಬುದರ ಬಗ್ಗೆ ಸಣ್ಣ ವಿಡಿಯೋ ತುಣುಕುಗಳ ಮೂಲಕ ಪ್ರತಿ ಗ್ರಾ.ಪಂ ವ್ಯಾಪ್ತಿಯಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಪ್ರತಿ 30 ಮೀಟರ್‌ಗೆ ಒಂದು ಕಲ್ಲು ಅಳವಡಿಸಲಾಗಿದ್ದು, ಅದರಲ್ಲಿ ಮಾಹಿತಿ ಒದಗಿಸಲಾಗಿದೆ.

ಪ್ರತಿ 1 ಕಿ.ಮೀ.ಗೆ ಸೂಚನಾ ಫಲಕವನ್ನು ಸಹ ಅಳವಡಿಸಲಾಗಿರುತ್ತದೆ. ಗ್ಯಾಸ್ ಸೋರಿಕೆಯಾದರೆ ಯಾವ ಸಂಖ್ಯೆಗೆ ಕರೆ ಮಾಡಬೇಕು

▶▶ 3ನೇ ಪುಟಕ್ಕೆ

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಬ್ಯಾಕೋಡ ಮಾತನಾಡಿ, ಗ್ಯಾಸ್ ಸೋರಿಕೆ ಪ್ರಕರಣಗಳನ್ನು ಸಂಭವಿಸಿದಾಗ ತುರ್ತು ಕ್ರಮಗಳನ್ನು ಕೈಗೊಳ್ಳುವುದು ಅಗತ್ಯವಾಗಿರುತ್ತದೆ. ಗ್ಯಾಸ್ ಸೋರಿಕೆ ಸ್ಥಳದಲ್ಲಿ ಮೊಬೈಲ್ ಬಳಕೆಯನ್ನು ನಿಷೇಧಿಸಬೇಕು. ಗ್ಯಾಸ್ ಬಳಸುವಾಗ ಎಚ್ಚರಿಕೆ ವಹಿಸಬೇಕಾಗುತ್ತದೆ. ಸಾರ್ವಜನಿಕರಿಗೆ ಗ್ಯಾಸ್ ಸೋರಿಕೆ ಕುರಿತು ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದರು.



## ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ ಉದ್ಘಾಟನೆ ಇಂದು

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾಡಳಿತ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಶಯದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧಿ ಅವರ ಪುಣ್ಯ ತಿಥಿ ಅಂಗವಾಗಿ ಹುತಾತ್ಮರ ದಿನಾಚರಣೆ ಹಾಗೂ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ ಕಾರ್ಯಕ್ರಕ್ಕೆ ಜ.30ರ ಬೆಳಿಗ್ಗೆ 10:30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ಚಾಲನೆ ನೀಡಲಾಗುತ್ತದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ. ಶಶಿ ಪಾಟೀಲ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ ಕಾರ್ಯಕ್ರಮದಲ್ಲಿ ಪ್ರಚಾರ ಸಾಮಗ್ರಿಗಳ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಪ್ರಕಟಿಸಿರುವ ಗಾಂಧಿ ಭಾರತ ಮರುನಿರ್ಮಾಣ ಪುಸ್ತಕ ಬಿಡುಗಡೆ ಜರುಗಲಿದೆ.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಸೇರಿದಂತೆ ಇತರರು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನದ ಪಾಕ್ಷಿಕ ಆಚರಣೆ ಕುರಿತು ಜಿಲ್ಲಾ ಸಮನ್ವಯ ಸಮಿತಿ ಸಭೆ**

# ಅಭಿಯಾನವನ್ನು ಪರಿಣಾಮಕಾರಿಯಾಗಿ ಜರುಗಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಜನವರಿ 30ರಿಂದ ಫೆಬ್ರುವರಿ 13ರವರೆಗೆ ಕುಷ್ಠರೋಗ ಜಾಗೃತಿ ಅಭಿಯಾನ ಆಯೋಜಿಸಲಾಗಿದ್ದು, ವಿವಿಧ ಇಲಾಖೆಗಳ ಸಮನ್ವಯತೆಯಿಂದ ಈ ಅಭಿಯಾನವನ್ನು ಪರಿಣಾಮಕಾರಿಯಾಗಿ ಜರುಗಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ರಾಷ್ಟ್ರೀಯ ಕುಷ್ಟರೋಗ ನಿರ್ಮೂಲನ ಕಾರ್ಯಕ್ರಮದಡಿಯಲ್ಲಿ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನದ ಪಾಕ್ಷಿಕ ಆಚರಣೆ ಕುರಿತು ಜಿಲ್ಲಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕುಷ್ಠರೋಗದ ಕುರಿತು ಜನಸಾಮಾನ್ಯರಲ್ಲಿ ಭಯ ಬೇಡ. ಕುಷ್ಠರೋಗವನ್ನು ಶೀಘ್ರವಾಗಿ ಪತ್ತೆ ಹಚ್ಚುವುದು ಮುಖ್ಯವಾಗಿದೆ. ಕುಷ್ಠರೋಗಕ್ಕೆ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಬಹುವಿಧ ಚಿಕಿತ್ಸೆಯನ್ನು ನೀಡಲಾಗುತ್ತದೆ. ಈ ರೋಗಕ್ಕೆ ಅಂಟಿಕೊಂಡಿರುವ ಕಳಂಕ ಹಾಗೂ ತಾರತಮ್ಯವನ್ನು ಹೋಗಲಾಡಿಸಿ ಕುಷ್ಠರೋಗಿಗಳಿಗೆ ಸಮಾಜದ ಮುಖ್ಯವಾಹಿನಿಯಲ್ಲಿ ಗೌರವಯುತವಾಗಿ ಬದುಕಲು ಅವಕಾಶ ನೀಡೋಣ. ಈ ಕುರಿತು ಜನಸಾಮಾನ್ಯರಲ್ಲಿ ಜಾಗೃತಿ ಅಭಿಯಾನ ಹಮ್ಮಿಕೊಂಡು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ನಿರ್ದೇಶನ ನೀಡಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕುಷ್ಠರೋಗ ವಿಭಾಗದ ಭಿತ್ತಿಪತ್ರವನ್ನು ಬಿಡುಗಡೆ ಮಾಡಲಾಯಿತು.



ಸಭೆಯಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ. ಮೀನಾಕ್ಷಿ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಠೋಡ, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ. ವೈ.ಕೆ. ಭಜಂತ್ರಿ, ತಾಲೂಕಾ ಆರೋಗ್ಯಾಧಿಕಾರಿಗಳು, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ ಚವ್ಹಾಣ, ಸಮಿತಿ ಸದಸ್ಯರು, ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿ ಡಾ. ರಾಜೇಂದ್ರ ಬಸರಿಗಿಡದ ಮಾತನಾಡಿ, ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನವನ್ನು ಜ.30ರಿಂದ ಫೆ.13ರವರೆಗೆ ಹಮ್ಮಿಕೊಳ್ಳಲಾಗಿದ್ದು, ಸದರಿ ಅವಧಿಯಲ್ಲಿ ಕುಷ್ಟರೋಗದ ಕುರಿತು ಅರಿವು ಮೂಡಿಸಲಾಗುವುದು. ಕುಷ್ಟರೋಗ ಸಂಪೂರ್ಣ ಗುಣಮುಖ ಹೊಂದುವ ಕಾಯಿಲೆಯಾಗಿದ್ದು ರೋಗವನ್ನು ಶೀಘ್ರ ಪತ್ತೆ ಹಚ್ಚಿ ನಿಗದಿತ ಸಂಪೂರ್ಣ ಚಿಕಿತ್ಸೆಯನ್ನು ಪಡೆದು ನಿಯಮಿತ ವ್ಯಾಯಾಮ ಮಾಡಿದಲ್ಲಿ ಸಂಪೂರ್ಣ ಗುಣಮುಖರಾಗಬಹುದಾಗಿದೆ. ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಬಹುವಿಧ ಔಷಧಿ ಚಿಕಿತ್ಸೆ ಉಚಿತವಾಗಿ ಲಭ್ಯವಿದೆ ಎಂದು ತಿಳಿಸಿದರು.

# ದೇಶದ ಸಾರ್ವಭೌಮತ್ವಕ್ಕೆ ಧಕ್ಕೆ




■ ವಿಜಯಸಾಕ್ಷಿ ಸುದ್ದಿ, ಗದಗ

ಮಹಾಕುಂಭ ಮೇಳದಲ್ಲಿ ಹಿಂದೂ ರಾಷ್ಟ್ರಕ್ಕೆ ಹಿಂದೂ ಸಂವಿಧಾನ ಬಿಡುಗಡೆ ಪ್ರಯತ್ನ ನಡೆದಿರುವುದು ದೇಶದ ಸಾರ್ವಭೌಮತ್ವಕ್ಕೆ ಧಕ್ಕೆ ತರುವ ಪ್ರಯತ್ನಗಳಲ್ಲಿ ಒಂದಾಗಿದೆ ಎಂದು ಸಾಹಿತಿ ಬಸವರಾಜ ಸೂಳಿಭಾವಿ ಆರೋಪಿಸಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಹಿಂದೂ ರಾಷ್ಟ್ರಕ್ಕೆ ಹಿಂದೂ ಸಂವಿಧಾನ ತರಲು ಹೊರಟಿರುವವರಿಗೆ ಈಗಿರುವ ಸಂವಿಧಾನದ ಬಗ್ಗೆ ಅವರಿಗಿರುವ ತಕರಾರುಗಳೇನು? ಹಿಂದುತ್ವ ಎನ್ನವುದು ಸಮಾನತೆಗೆ ವಿರುದ್ಧವಾದ ಪರಿಕಲ್ಪನೆ. ಜಾತಿ, ವರ್ಣ ವ್ಯವಸ್ಥೆ ಆಧಾರಿತ ಸಾಮಾಜಿಕ ಸಂರಚನೆ. ಹಿಂದೂಗಳಲ್ಲಿಯೇ ಸಮಾನವಾಗಿ ಕಾಣದ ಹಿಂದೂ ಧರ್ಮದಲ್ಲಿ ಇನ್ನಿತರ ಜಾತಿ ಧರ್ಮದವರನ್ನು ಹೇಗೆ ಸಮಾನವಾಗಿ ಕಾಣಲು ಸಾಧ್ಯ ಎಂದು ಪ್ರಶ್ನಿಸಿದರು.

ಸಂವಿಧಾನ ಭಾರತವನ್ನು ಸಾರ್ವಭೌಮ ರಾಷ್ಟ್ರವನ್ನಾಗಿ ಘೋಷಣೆ ಮಾಡಿದೆ. ಸಂವಿಧಾನದ ಅಡಿಯಲ್ಲಿ ದೇಶ ಉತ್ತರೋತ್ತರ ಅಭಿವೃದ್ಧಿಯಾಗವ ಕಾಲ ಘಟ್ಟದಲ್ಲಿ ಹಿಂದೂ ಸಂಘಟನೆಗಳು ದೇಶವನ್ನು ಹಿಂದಕ್ಕೆ ಒಯ್ಯುವ ಪ್ರಯತ್ನ ಮಾಡುತ್ತಿವೆ. ಅಷ್ಟಕ್ಕೂ ಹಿಂದೂ ಸಂವಿಧಾನ ಅಧಿಕೃತ ಅಲ್ಲ. ಸಂವಿಧಾನ ರಚನೆ ಎನ್ನುವದು ಮಕ್ಕಳಾಟವೂ ಅಲ್ಲ. ಆದರೆ ಇಂಥ ದೇಶ ವಿರೋಧಿ, ಸಂವಿಧಾನ ವಿರೋಧಿ ಕೃತ್ಯಗಳನ್ನು ತಡೆಯುವಲ್ಲಿ ಸರಕಾರಗಳು ವಿಫಲವಾಗಿರುವುದು ಖಂಡನೀಯ ಎಂದರು.

ಸುದ್ದಿಗೋಷ್ಠಿಯಲ್ಲಿ ಶೇಕಣ್ಣ ಕವಳಿಕಾಯಿ, ಬಾಲರಾಜ ಅರಬರ, ಶರೀಫ್ ಬಿಳೆಯಲಿ, ಬಸವರಾಜ ಪೂಜಾರ, ಆನಂದ ಸಿಂಗಾಡಿ, ನಾಗರಾಜ ಗೋಕಾವಿ, ಶಿವಾನಂದ ತಮ್ಮಣ್ಣವರ, ಪರಶು ಕಾಳೆ, ಮುತ್ತು ಬಿಳೆಯಲಿ ಉಪಸ್ಥಿತರಿದ್ದರು.

## ಕೃಷಿ ತಂತ್ರಜ್ಞಾನ, ಯಂತ್ರೋಪಕರಣಗಳ ವಸ್ತು ಪ್ರದರ್ಶನಕ್ಕೆ ಚಾಲನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕೃಷಿ ಇಲಾಖೆ ಹಾಗೂ ಐ.ಸಿ.ಎ.ಆರ್-ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ ಹುಲಕೋಟಿ ಸಹಯೋಗದಲ್ಲಿ ಹುಲಕೋಟಿಯ ಶ್ರೀ ಕೈಲಾಸ ಆಶ್ರಮದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಕೃಷಿ ತಂತ್ರಜ್ಞಾನ ಹಾಗೂ ಯಂತ್ರೋಪಕರಣಗಳ ವಸ್ತುಪ್ರದರ್ಶನವನ್ನು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಉದ್ಘಾಟಿಸಿದರು.

ಬೆಂಗಳೂರಿನ ಶ್ರೀ ಕೈಲಾಸ ಆಶ್ರಮ ಮಹಾಸಂಸ್ಥಾನದ ಪೀಠಾದಿಪತಿಗಳಾದ ಜಗದ್ಗುರು ಜಯೇಂದ್ರಪುರಿ ಮಹಾಸ್ವಾಮಿಗಳು, ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮದ ನಿರ್ಭಯಾನಂದ ಸರಸ್ವತಿ ಮಹಾಸ್ವಾಮಿಗಳು ಸಮಾರಂಭದ ಸಾನ್ನಿಧ್ಯ ವಹಿಸಿದ್ದರು.



ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ಚೇರಮನ್ ಹಾಗೂ ಮಾಜಿ ಶಾಸಕ ಡಿ.ಆರ್. ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಗಣ್ಯರಾದ ಸಿದ್ದು ಪಾಟೀಲ, ವಾಸಣ್ಣ ಕುರಡಗಿ, ಹುಲಕೋಟಿ ಅಗ್ರಿಕಲ್ಚರಲ್ ಸೈನ್ಸ್ ಫೌಂಡೇಶನ್ ಉಪಾಧ್ಯಕ್ಷ ಶಂಕರಗೌಡ ಪಾಟೀಲ, ಅಗ್ರಿಕಲ್ಚರ್ ಸೈನ್ಸ್ ಫೌಂಡೇಶನ್ ನಿರ್ದೇಶಕ ರವಿ ಮೂಲಿಮನಿ, ಗೌರವ ಕಾರ್ಯದರ್ಶಿ ಜಿ.ಸಿ. ಕೊರವನವರ, ಹುಲಕೋಟಿ ಗ್ರಾ.ಪಂ ಅಧ್ಯಕ್ಷರಾದ ನಾಗರತ್ನ ಬಾಳಿಹಳ್ಳಿಮಠ, ಉಪಾಧ್ಯಕ್ಷರಾದ ಎ.ಯು. ತಹಸೀಲ್ದಾರ, ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ. ಸುಧಾ ಮಂಕಣಿ ಹಾಜರಿದ್ದರು.

ವಸ್ತು ಪ್ರದರ್ಶನದಲ್ಲಿ ಕೃಷಿ ಹಾಗೂ ತೋಟಗಾರಿಕೆ ಬೆಳೆಗಳ ತಂತ್ರಜ್ಞಾನ, ನೈಸರ್ಗಿಕ ಕೃಷಿ ತಂತ್ರಜ್ಞಾನ, ಪಶು ಸಂಗೋಪನೆ ತಂತ್ರಜ್ಞಾನ, ಸಿರಿಧಾನ್ಯಗಳು ಹಾಗೂ ಮೌಲ್ಯ ವರ್ಧನೆ, ಸಾವಯುವ ಕೃಷಿ ಮಳಿಗೆ ಸೇರಿದಂತೆ ವಿವಿಧ ಮಳಿಗೆಗಳು ಸಾರ್ವಜನಿಕರಿಗೆ ಹಾಗೂ ರೈತರಿಗೆ ಉಪಯುಕ್ತವಾದ ಮಾಹಿತಿಯನ್ನು ಬಿಂಬಿಸುತ್ತಿದ್ದವು.

## ಪುರಾತತ್ವ ಸಂಗ್ರಹಾಲಯಗಳ, ಪರಂಪರೆ ಇಲಾಖೆ ಆಯುಕ್ತರ ಭೇಟಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಆಯುಕ್ತರಾದ ದೇವರಾಜು ಅವರು ಮಂಗಳವಾರ ಗದಗ ಜಿಲ್ಲೆಯ ಲಕ್ಕುಂಡಿ ಗ್ರಾಮದಲ್ಲಿನ ಸ್ಮಾರಕಗಳಿಗೆ ಭೇಟಿ ನೀಡಿದರು.

ದಿನಾಂಕ: 22-11-2024 ರಿಂದ 24-11-2024 ರವರೆಗೆ ಲಕ್ಕುಂಡಿ ಗ್ರಾಮದಲ್ಲಿ ಜರುಗಿಸಲಾದ ಪ್ರಾಚ್ಯಾವಶೇಷಗಳ ಅನ್ವೇಷಣೆ ಕಾರ್ಯಕ್ರಮದಲ್ಲಿ ಸಂಗ್ರಹವಾದ ಶಿಲಾ ಶಾಸನಗಳು, ಶಿಲ್ಪಗಳು, ನಾಣ್ಯಗಳು ಮುಂತಾದ ಪ್ರಾಚ್ಯಾವಶೇಷಗಳನ್ನು ವೀಕ್ಷಿಸಿದರು. ಇವುಗಳನ್ನು ಸೂಕ್ತ ರೀತಿಯಲ್ಲಿ ಸಂರಕ್ಷಣೆ ಮಾಡಲು ಸೂಚಿಸಿದರು.

ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಡಿಯಲ್ಲಿ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ವತಿಯಿಂದ ರೂ. 5.00 ಕೋಟಿ ವೆಚ್ಚದಲ್ಲಿ ಮಂಜೂರಾಗಿ ಕಾರ್ಯಾರಂಭ ಮಾಡಿದ ವಿವಿಧ ಸ್ಮಾರಕಗಳ ಅಭಿವೃದ್ಧಿ ಕಾಮಗಾರಿಗಳನ್ನು ವೀಕ್ಷಿಸಿದರು ಹಾಗೂ ತ್ವರಿತವಾಗಿ ಕಾಮಗಾರಿಗಳನ್ನು ಮುಕ್ತಾಯ ಗೊಳಿಸುವಂತೆ ಸಂಬಂಧಪಟ್ಟ ಗುತ್ತಿಗೆದಾರರಿಗೆ ನಿರ್ದೇಶನ ನೀಡಿದರು ಎಂದು ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಪ್ರಕಟಣೆ ತಿಳಿಸಿದೆ.



## ಸಂಪಾದಕೀಯ

# ಬೆಂಬಲ ಬೆಲೆಗಿಲ್ಲ ಬೆಲೆ

ರೈತರ ಬೆಳೆದ ಬೆಳೆಗೆ ಬೆಂಬಲ ಬೆಲೆ ಸಿಗಬೇಕು ವೈಜ್ಞಾನಿಕ ಬೆಲೆ ನಿಗದಿಯಾಗಬೇಕು ಎನ್ನುವಂತಹ ಹಲವಾರು ಬೇಡಿಕೆಗಳ ಈಡೇರಿಕೆಗಾಗಿ ದೇಶದಲ್ಲಿ ಪ್ರತಿಭಟನೆಗಳು ನಿರಂತರವಾಗಿ ನಡೆಯುತ್ತಿವೆ. ಪಂಜಾಬ್ ಮತ್ತು ಹರಿಯಾಣ ಗಡಿಯಲ್ಲಿ ನಡೆದ ರೈತರ ಹೋರಾಟ ಕೇಂದ್ರ ಸರ್ಕಾರವನ್ನೇ ಅಲುಗಾಡಿಸುವ ಮಟ್ಟಿಗೆ ಪ್ರಭಾವಶಾಲಿಯಾಗಿತ್ತು.

ರೈತರ ಹೋರಾಟದಿಂದಾಗಿಯೇ ಇವತ್ತು ಸರ್ಕಾರ ಬೆಂಬಲ ಬೆಲೆ ಘೋಷಣೆ ಮಾಡುತ್ತಿದೆ. ಕಾಲಕಾಲಕ್ಕೆ ರೈತರ ಬೆಳೆದ ಬೆಳೆಗೆ ಉತ್ತಮ ಬೆಲೆ ಸಿಗಲಿ ಎನ್ನುವ ಕಾರಣಕ್ಕೆ ಬೆಂಬಲ ಬೆಲೆ ನಿಗದಿ ಮಾಡಲಾಗುತ್ತದೆ. ಹೀಗೆ ಘೋಷಣೆಯಾದ ಬೆಂಬಲ ಬೆಲೆ ಮಾರುಕಟ್ಟೆ ದರಕಿಂತ ಹೆಚ್ಚಿರಬೇಕು ಎನ್ನುವುದು ರೈತರ ಅಭಿಪ್ರಾಯ. ಆದರೆ ಬಹುತೇಕ ಸಂದರ್ಭದಲ್ಲಿ ಬೆಂಬಲ ಬೆಲೆ ಮಾರುಕಟ್ಟೆ ಬೆಲೆಗಿಂತ ಕಡಿಮೆಯೇ ಇರುತ್ತದೆ.

ಕಾರಣ ಇದು ಬೆಂಬಲ ಬೆಲೆ. ರೈತರು ನಷ್ಟಕ್ಕೆ ಈಡಾಗುವುದನ್ನ ತಪ್ಪಿಸಲು ಸರ್ಕಾರ ನಿಗದಿಪಡಿಸುವ ಬೆಲೆ. ಹೀಗಾಗಿ ರೈತ ಬಯಸಿದಂತೆ, ರೈತನ ನಿರೀಕ್ಷೆಯಂತೆ ಬೆಲೆ ನಿಗದಿ ಮಾಡಲು ಸಾಧ್ಯವಿಲ್ಲ ಎನ್ನುತ್ತಾರೆ ಅಧಿಕಾರಿಗಳು. ಆದರೆ ರೈತನಿಗೆ ಲಾಭ ಆಗದಿದ್ದರೆ ಅದು ನಷ್ಟವೇ ತಾನೆ? ತಾನು ಬೆಳೆಯಲು ಮಾಡಿದ ಖರ್ಚಿಗಿಂತ ಕಡಿಮೆ ಬೆಲೆಗೆ ತನ್ನ ಉತ್ಪನ್ನವನ್ನು ಮಾರಾಟ ಮಾಡಿಕೊಳ್ಳುವಂತಹ ಅನಿವಾರ್ಯತೆ ಬಂದರೆ ಅದು ಸಹ ನಷ್ಟವೇ ಅಲ್ಲವೇ?

ಹೀಗಾಗಿ ಸರ್ಕಾರ ಬೆಂಬಲ ಬೆಲೆ ನಿಗದಿಪಡಿಸುವಾಗ ರೈತರಿಗೆ ಆಗುವ ಲಾಭ ನಷ್ಟದ ಲೆಕ್ಕಾಚಾರವನ್ನು ಪರಿಗಣಿಸಬೇಕು. ಹೀಗೆ ಪರಿಗಣಿಸಿ ನಿಗದಿಪಡಿಸುವ ದರವೇ ವೈಜ್ಞಾನಿಕ ದರ. ಸರ್ಕಾರ ಇನ್ನಾದರೂ ಬೆಂಬಲ ಬೆಲೆ ಯೋಜನೆಯನ್ನು ತೆಗೆದು ವೈಜ್ಞಾನಿಕವಾಗಿ ದರ ನಿಗದಿ ಮಾಡಿ ರೈತರಿಗೆ ಅನುಕೂಲ ಕಲ್ಪಿಸಿದಲ್ಲಿ ಅನ್ನದಾತ ನೆಮ್ಮದಿಯ ನಿಟ್ಟುಸಿರು ಬಿಡಲು ಸಾಧ್ಯ

### ಎನ್‌ಪಿಎಸ್ ನೌಕರರ ಸಂಘದಿಂದ ಹಮ್ಮಿಕೊಳ್ಳಲಾಗಿದ್ದ ಪತ್ರ ಚಳುವಳಿಯಲ್ಲಿ ಎಫ್.ಎಸ್. ತಳವಾರ

# ನೌಕರರು ಎನ್‌ಪಿಎಸ್ ರದ್ದತಿಗೆ ಎದುರು ನೋಡುತ್ತಿದ್ದಾರೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹೊಸ ಪಿಂಚಣಿ ವ್ಯವಸ್ಥೆ (ಎನ್.ಪಿ.ಎಸ್) ರದ್ದುಪಡಿಸಿ ಹಳೆ ಪಿಂಚಣಿ ವ್ಯವಸ್ಥೆ (ಒ.ಪಿ.ಎಸ್) ಜಾರಿಗೊಳಿಸಬೇಕು ಎಂದು ಕರ್ನಾಟಕ ರಾಜ್ಯ ಸರಕಾರಿ ಎನ್‌ಪಿಎಸ್ ನೌಕರರ ಸಂಘ ತಾಲೂಕಾಧ್ಯಕ್ಷ ಎಫ್.ಎಸ್. ತಳವಾರ ಹೇಳಿದರು

ಅವರು ಬುಧವಾರ ಪಟ್ಟಣದ ಅಂಚೆ ಕಚೇರಿ ಮುಂದೆ ಎನ್‌ಪಿಎಸ್ ನೌಕರರ ಸಂಘದಿಂದ ಹಮ್ಮಿಕೊಳ್ಳಲಾಗಿದ್ದ ಪತ್ರ ಚಳುವಳಿ ಉದ್ದೇಶಿಸಿ ಮಾತನಾಡಿದರು.

ಪ್ರಸ್ತುತ ರಾಜ್ಯದಲ್ಲಿ 2 ಲಕ್ಷ 65ಸಾವಿರ ಎನ್‌ಪಿಎಸ್ ನೌಕರರು ಹಾಗೂ ಅಷ್ಟೇ ಸಂಖ್ಯೆಯ ನಿಗಮ ಮಂಡಳಿ ಅನುದಾನಿತ ಹಾಗೂ ಸ್ವಾಯುತ್ತ ಸಂಸ್ಥೆಗಳ ನೌಕರರು ಎನ್‌ಪಿಎಸ್ ರದ್ದತಿಗೆ ಎದುರು ನೋಡುತ್ತಿದ್ದು, ಸರಕಾರ ಆದಷ್ಟು ಬೇಗನೆ ರದ್ದು ಪಡಿಸಿ ನೌಕರರ ಬೇಡಿಕೆ ಈಡೇರಿಸಬೇಕು ಎಂದು ಆಗ್ರಹಿಸುವದಾಗಿ ಹೇಳಿದರು. ರಾಜ್ಯ ಸರಕಾರ ಚುನಾವಣಾ ಪೂರ್ವದಲ್ಲಿ ತಮ್ಮ ಪ್ರಣಾಳಿಕೆಯಲ್ಲಿ ಅಧಿಕಾರಕ್ಕೆ ಬಂದರೆ ಓಪಿಎಸ್ ಜಾರಿ ಮಾಡುವುದಾಗಿ ಭರವಸೆ ನೀಡಿತ್ತು. ಆದರೆ ಅಧಿಕಾರಕ್ಕೆ ಬಂದು



ಎರಡು ವರ್ಷಗಳಾಗುತ್ತಾ ಬಂದರೂ ಕೊಟ್ಟ ಮಾತು ಈಡೇರಿಸುವದಕ್ಕೆ ವಿಳಂಬಧೋರಣೆ ಅನುಸರಿಸುತ್ತಿರುವದನ್ನು ಕೈಬಿಡಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಎನ್‌ಪಿಎಸ್ ನೌಕರರ ಸಂಘ ಗೌರವಾಧ್ಯಕ್ಷ ಮಂಜುನಾಥ ಕೊಕ್ಕರಗುಂದಿ, ಪ್ರ.ಕಾರ್ಯದರ್ಶಿ ಸಿದ್ದಪ್ಪ ಪೂಜಾರ, ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ತಾಲೂಕಾಧ್ಯಕ್ಷ ಗುರುರಾಜ ಹವಳದ, ಶ್ರೀಕಾಂತ ನಂದೆಣ್ಣವರ, ಡಿ.ಡಿ. ಲಮಾಣಿ, ಮಂಜುನಾಥ ಚಾಕಲಬ್ಬಿ, ಎಲ್.ಎ. ನಂದೆಣ್ಣವರ, ಎಂ.ಎ. ಅಕ್ಕಿ, ಫಕ್ಕೀರೇಶ ಡಂಬಳ, ಎಚ್.ವಾಯ್. ಹಂಜಗಿ, ಬಸವರಾಜ ಹೆಬ್ಬಾಳ, ನಾಗರಾಜ ಶಿಗ್ಲಿ, ಎಂ.ಎ. ನದಾಫ್, ಬಸವರಾಜ ಯರಗುಪ್ಪಿ, ಸತೀಶ ಬೋಮಲೆ, ಬಿ.ವಿ. ಯತ್ತಿನಹಳ್ಳಿ, ಎಂ.ಎಸ್. ಹಿರೇಮಠ ಸೇರಿದಂತೆ ಶಿಕ್ಷಣ ಇಲಾಖೆ, ಕಂದಾಯ ಇಲಾಖೆ ಸೇರಿದಂತೆ ಇನ್ನಿತರ ಇಲಾಖೆಯ ಎನ್‌ಪಿಎಸ್ ನೌಕರರ ಹಾಜರಿದ್ದರು.

ಕ.ರಾ.ಪ್ರಾ ಶಾಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಚಂದ್ರಕಾಂತ ನೇಕಾರ ಮಾತನಾಡಿ, ಈಗಾಗಲೆ ಕೊಟ್ಟ ಮಾತಿನಂತೆ 5 ಗ್ಯಾರಂಟಿಗಳನ್ನು ಈಡೇರಿಸುವ ಮೂಲಕ ಜನರ ಮನಸ್ಸಿನಲ್ಲಿ ಉಳಿದಿರುವ ಸರಕಾರ ಓಪಿಎಸ್ ನೀಡುವ ಮೂಲಕ ನೌಕರರ ಮನದಲ್ಲೂ ಉಳಿಯಬೇಕು. ಎನ್‌ಪಿಎಸ್ ವಿರುದ್ಧ ಹೋರಾಟಕ್ಕೆ ಕರೆಕೊಟ್ಟು ರಾಜ್ಯದ ಲಕ್ಷಾಂತರ ನೌಕರರು ಮುಖ್ಯಮಂತ್ರಿಗಳಿಗೆ ಅಂಚೆ ಪತ್ರಗಳನ್ನು ಬರೆಯುವ ಚಳುವಳಿ ಆರಂಭಿಸಿದ್ದೇವೆ. ನೊಂದ ನೌಕರರಿಗೆ ಶೀಘ್ರ ಓಪಿಎಸ್ ನೀಡುವ ಕುರಿತು ಸರಕಾರ ಕ್ರಮ ಕೈಗೊಳ್ಳಬೇಕು. ಸ್ಪಂದಿಸದಿದ್ದರೆ ಫೆಬ್ರುವರಿ 7ರಂದು ಒಂದು ಲಕ್ಷಕ್ಕೂ ಹೆಚ್ಚು ನೌಕರರು ಸೇರಿ ಬೆಂಗಳೂರಿನ ಫ್ರೀಡಂ ಪಾರ್ಕನಲ್ಲಿ ಬೃಹತ್ ಧರಣಿ ಉಪವಾಸ ಸತ್ಯಾಗ್ರಹ ಕೈಗೊಳ್ಳುತ್ತೇವೆ ಎಂದು ಹೇಳಿದರು.

### ಬೆಂಬಲ ಬೆಲೆ ಯೋಜನೆಯಡಿ ಕಡಲೆ ಖರೀದಿಗೆ ಬೆಲೆ ನಿಗದಿ । ಡಿಸಿ ಸಿ.ಎನ್. ಶ್ರೀಧರ್ ನಿರ್ದೇಶನ

# ಯೋಜನೆಯ ದುರುಪಯೋಗವಾಗದಂತೆ ಮುನ್ನೆಚ್ಚರಿಕೆ ವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಕಡಲೆ ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ನಿರ್ದೇಶನ ನೀಡಿದರು.

ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ 2024-25ನೇ ಸಾಲಿನ ಹಿಂಗಾರು ಹಂಗಾಮಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕಡಲೆ ಹುಟ್ಟುವಳಿಯನ್ನು ಖರೀದಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದ ಮಾನದಂಡಗಳನ್ವಯ ಎಫ್.ಎ.ಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ಖರೀದಿ ಏಜೆನ್ಸಿಯವರು ತಮ್ಮ ಸಂಸ್ಥೆಯ ಹಿರಿಯ ಅಧಿಕಾರಿಗಳು ಮೇಲುಸ್ತುವಾರಿ ತಪಾಸಣೆ ಕೈಗೊಳ್ಳಬೇಕು. ಪ್ರತಿ ಖರೀದಿ ಕೇಂದ್ರಕ್ಕೆ ಗ್ರೇಡರ್‌ಗಳನ್ನು ನೇಮಿಸಬೇಕು.



ಜಿಲ್ಲೆಯ ಪ್ರತಿ ರೈತರಿಂದ ಎಕರೆಗೆ 4 ಕ್ವಿಂಟಲ್‌ನಂತೆ ಗರಿಷ್ಠ 20 ಕ್ವಿಂಟಲ್ ಎಫ್.ಎ.ಕ್ಯೂ ಗುಣಮಟ್ಟದ ಕಡಲೆ ಕಾಳನ್ನು ಖರೀದಿಸಲು ಹಾಗೂ ಕಡಲೆ ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ಕಡಲೆ ಕಾಳು ಖರೀದಿಸಿದಂತೆ ಹಾಗೂ ಖರೀದಿ ಸಂಸ್ಥೆಗಳು ಯಾವುದೇ ರೀತಿಯ ದುರುಪಯೋಗ ಆಗದಂತೆ ಎಲ್ಲ ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚಿಸಿದರು.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ.ಎಚ್, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ವಿನೋದಕುಮಾರ್ ಹೆಗ್ಗಳಗಿ, ತೋಟಗಾರಿಕೆ ಇಲಾಖೆ, ಸಹಕಾರಿ ಸಂಘಗಳ ಇಲಾಖೆ, ಕೃಷಿ ಮಾರಾಟ ಇಲಾಖೆ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿಗಳು, ಮಾರ್ಕೆಟಿಂಗ್ ಫೆಡರೇಶನ್ ಶಾಖಾ ವ್ಯವಸ್ಥಾಪಕರು ಹಾಜರಿದ್ದರು.

**ಕಡಲೆ ಖರೀದಿ ಕೇಂದ್ರಗಳು:** ಗದಗ ತಾಲೂಕು (23): ಪಿಎಸಿಎಸ್ ಬಿಂಕದಕಟ್ಟಿ, ಹೊಂಬಳ, ಬಳಗಾನೂರ, ಹರ್ಲಾಪುರ, ಕುರ್ತಕೋಟಿ, ಶಿರೋಳ, ಕೋಟುಮಚಗಿ-1, ಕೋಟುಮಚಗಿ-2, ಕಣಗಿನಹಾಳ, ಲಕ್ಕುಂಡಿ, ನೀರಲಗಿ, ಸೊರಟೂರ, ಕದಡಿ, ಮುಳಗುಂದ, ತಿಮ್ಮಾಪುರ, ನಾಗಾವಿ-2, ನಾಗಾವಿ-1, ಅಂತೂರ, ಎಚ್.ಎಸ್. ವೆಂಕಟಾಪೂರ, ಟಿಎಪಿಸಿಎಂಎಸ್ ಗದಗ, ಶ್ರೀ ಪ್ರಭುಸ್ವಾಮಿ ಪಿಎಸಿಎಸ್ ಹೊಂಬಳ, ಶ್ರಮಜೀವಿ, ಎಫ್‌ಪಿಓ ಹಿರೇಹಂದಿಗೋಳ, ಗದಗ ಕಾಟನ್ ಸೇಲ್ ಸೊಸೈಟಿ.

ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕು (6): ಪಿಎಸಿಎಸ್ ಅಡರಗಟ್ಟಿ, ಶಿರಹಟ್ಟಿ, ಯಳವತ್ತಿ, ಟಿಎಪಿಸಿಎಂಎಸ್ ಲಕ್ಷ್ಮೇಶ್ವರ, ಶಿರಹಟ್ಟಿ, ಭೂ ಪರಿವರ್ತನೆ ಫಾರ್ಮರ್ಸ್ ಪ್ರೊಡ್ಯೂಜರ್ ಕಂ. ಲಿ ಬೆಳ್ಳಟ್ಟಿ.

**ಮುಂಡರಗಿ (6):** ಪಿಎಸಿಎಸ್ ಆಲೂರು, ಪೇಠಾಲೂರ, ಬರದೂರ, ಹಳ್ಳಿಕೇರಿ, ಟಿಎಪಿಸಿಎಂಎಸ್ ಮುಂಡರಗಿ, ಚಂದನವನ ಫಾರ್ಮರ್ಸ್ ಪ್ರೊಡ್ಯೂಜರ್ ಕಂ ಲಿ ಡಂಬಳ.

ನರಗುಂದ (10): ಪಿಎಸಿಎಸ್ ಚಿಕ್ಕನರಗುಂದ, ಜಗಾಪೂರ, ಶಿರೋಳ, ಸುರಕೋಡ, ಸಂಕದಾಳ, ಕೊಣ್ಣೂರ, ಹಿರೇಕೊಪ್ಪ, ಖಾನಾಪುರ-ಗಂಗಾಪೂರ, ಟಿಎಪಿಸಿಎಂಎಸ್ ನರಗುಂದ, ಬಾಬಾಸಾಹೇಬ ರೈತ ಉತ್ಪಾದಕ ಕಂ ಲಿ ನರಗುಂದ.

ರೋಣ ಮತ್ತು ಗಜೇಂದ್ರಗಡ(24 )ಪಿಎಸಿಎಸ್ ಹೊಸಳ್ಳಿ, ಮಲ್ಲಾಪುರ, ರೋಣ-1, ರೋಣ-2, ಸೂಡಿ, ಸವಡಿ, ಯಾವಗಲ್, ಅಬ್ಬಿಗೇರಿ, ಬೆಳವಣಕಿ, ಇಟಗಿ, ನಿಡಗುಂದಿ, ಜಕ್ಕಲಿ, ಕೊತಬಾಳ, ಹೊಳೆ ಹಡಗಲಿ, ಹೊಳೆ ಆಲೂರ, ಯಾ.ಸ. ಹಡಗಲಿ, ಕೌಜಗೇರಿ, ಮೆಣಸಗಿ, ಹೊಳೆಮಣ್ಣೂರ, ಟಿಎಪಿಸಿಎಂಎಸ್ ರೋಣ, ಟಿಎಪಿಸಿಎಂಎಸ್ ಗಜೇಂದ್ರಗಡ, ಟಿಎಪಿಸಿಎಂಎಸ್ ನರೇಗಲ್, ಜನಚೇತನ ಫಾರ್ಮರ್ಸ್ ಪ್ರೊಡ್ಯೂಸರ್ ಕಂಪನಿ, ಸೂಡಿ, ಭೂಮಿ ಸಂಜೀವಿನಿ ಫಾರ್ಮರ್ಸ್ ಪ್ರೊಡ್ಯೂಸಿಂಗ್ ಕಂಪನಿ ನಿ ಸವಡಿ.

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರು ಮಾತನಾಡಿ, ಎಫ್.ಎ.ಕ್ಯೂ ಗುಣಮಟ್ಟದ ಕಡಲೆ ಹುಟ್ಟುವಳಿಗೆ ಪ್ರತಿ ಕ್ವಿಂಟಾಲ್‌ಗೆ ರೂ.5650ರಂತೆ ಕನಿಷ್ಠ ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ (ಮಾರ್ಕಫೆಡ್) ಸಂಸ್ಥೆಯನ್ನು ರಾಜ್ಯದ ವತಿಯಿಂದ ಖರೀದಿ ಸಂಸ್ಥೆಯನ್ನಾಗಿ ನೇಮಿಸಿದೆ. ರೈತರ ನೋಂದಣಿ ಕಾರ್ಯದ ಕಾಲಾವಧಿಯನ್ನು ಆದೇಶ ಹೊರಡಿಸಿದ ದಿನಾಂಕದಿಂದ 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ ಜರುಗಿಸಲಾಗುವುದು. ಜಿಲ್ಲೆಯ 69 ಕಡೆಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲು ತೀರ್ಮಾನಿಸಲಾಯಿತು.

# ಕೋಟೇಶನ್ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಸಾರ್ವಜನಿಕ ಶಿಕ್ಷಣ ಇಲಾಖೆಯ 2024-25ನೇ ಸಾಲಿನ ಸಮನ್ವಯ ಶಿಕ್ಷಣ ಮಧ್ಯವರ್ತನಾ ಚಟುವಟಿಕೆಗಳ ಆಯೋಜನೆಗೆ ಜಿಲ್ಲೆಯ ಒಂದು ಕೇಂದ್ರ ಶಿರಹಟ್ಟಿ ವಲಯಕ್ಕೆ ಸಂಬಂಧಿತ ಅಗತ್ಯ ಸಾಧನ-ಸಲಕರಣೆ ಖರೀದಿಸಲು ಕೋಟೆಷನ್ ಫೆಬ್ರವರಿ 5 ರವರೆಗೆ ಕಚೇರಿ ಅವಧಿಯಲ್ಲಿ ಸಲ್ಲಿಸಲು ಆಹ್ವಾನಿಸಲಾಗಿದೆ. ಸಂಬಂಧಿಸಿದ ಉಪಕರಣಗಳನ್ನು ಸರಬರಾಜು ಮಾಡಲು ಬಯಸುವ ಅರ್ಹ ಏಜೆನ್ಸಿ ಸಂಸ್ಥೆಯವರು ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಚೇರಿ, ಶಾಲಾ ಶಿಕ್ಷಣ ಇಲಾಖೆ, ಗದಗ ದೂರವಾಣಿ ಸಂಖ್ಯೆ-08372-220644 ಸಂಪರ್ಕಿಸಬಹುದಾಗಿದೆ.

# ಸಾಧಕರಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮಾಜದ ಶ್ರೇಯೋಭಿವೃದ್ಧಿಗಾಗಿ ಸೇವಾ ಮನೋಭಾವನೆಯಿಂದ ಸೇವೆ ಸಲ್ಲಿಸುವ ಮಹನೀಯರನ್ನು ಗೌರವಿಸುವ ಮೂಲಕ ಸಮಾಜ ಸೇವೆಗೆ ಪ್ರೇರೇಪಿಸುವುದು ಮುಖ್ಯವಾಗಿದೆ ಎಂದು ಗದಗ ಜಿಲ್ಲಾ ಚೆಸ್ ಅಸೋಸಿಯೇಶನ್ ಅಧ್ಯಕ್ಷ ಗಿರೀಶ ಅಗಡಿ ಹೇಳಿದರು.

ಅವರು ಮಂಗಳವಾರ ಪಟ್ಟಣದಲ್ಲಿ ಗದಗ ಜಿಲ್ಲಾ ಚೆಸ್ ಅಸೋಸಿಯೇಶನ್ ವತಿಯಿಂದ ರಾಜ್ಯ ಪ್ರಶಸ್ತಿ ಪುರಸ್ಕೃತ ಲಕ್ಷ್ಮೇಶ್ವರ ಸಮುದಾಯ ಆರೋಗ್ಯ ಕೇಂದ್ರದ ಆಡಳಿತಾಧಿಕಾರಿ ಡಾ. ಶ್ರೀಕಾಂತ ಕಾಟೇವಾಲೆ, ಪತ್ರಕರ್ತ ದಿಗಂಬರ ಪೂಜಾರ ಅವರನ್ನು ಸನ್ಮಾನಿಸಿ ಮಾತನಾಡಿದರು.

ಈ ವೇಳೆ ಗೌರವಾಧ್ಯಕ್ಷ ಆರ್.ವಿ. ವೆರ್ಣೇಕರ ಮಾತನಾಡಿದರು. ಎಂ.ಆಯ್. ಕಣಿಕೆ, ಶ್ರೀಕಾಂತ ಪೂಜಾರ, ಆದೇಶ ಹುಲಗೂರ, ವಾಸು ಪಾಟೀಲ, ಫಕ್ಕಿರೇಶ ಜಂತ್ಲಿ ಮುಂತಾದವರು ಉಪಸ್ಥಿತರಿದ್ದರು.



ಗದಗ ನಗರದ ಗಂಗಿಮಡಿಯ ಆಶ್ರಯ ಕಾಲೋನಿಯಲ್ಲಿ ಅಬುಹುರೇರಾ ಮಸ್ಜಿದ್ ಹಾಗೂ ಎಂ.ಜಿ. ಚಾರಿಟೇಬಲ್ ಟ್ರಸ್ಟ್ ವತಿಯಿಂದ 76ನೇ ಗಣರಾಜ್ಯೋತ್ಸವದ ಧ್ವಜಾರೋಹಣವನ್ನು ಅಬುಹುರೇರಾ ಮಸ್ಜಿದ್‌ನ ಅಧ್ಯಕ್ಷರಾದ ಚಾಂದಸಾಬ ಅಬ್ಬಿಗೇರಿಯವರು ನೆರವೇರಿಸಿದರು. ಈ ಸಂದರ್ಭದಲ್ಲಿ ಎಂ.ಜಿ. ಚಾರಿಟೇಬಲ್ ಟ್ರಸ್ಟ್‌ನ ಕಾರ್ಯದರ್ಶಿ ಮೌಲಾನಾ ಅಬ್ದುಲ್ ಗಫುರ್ ಪಲ್ಲೆದ, ಮಸ್ಜಿದ್ ಕಾರ್ಯದರ್ಶಿ ಮಹಮ್ಮದ್‌ಸಾಬ ಬೋದ್ಲೇಖಾನ್, ಅಹಮ್ಮದ್ ಹೊಸಮನಿ, ಬಾಬಾಜಾನ್ ಕೊಡತಗೇರಿ, ಅಹಮ್ಮದ್ ಕಲೆಗಾರ, ಮೈನುದ್ದಿನ ಗುಜಮಾಗಡಿ, ಸಿಕಂದರ ಶಿರಹಟ್ಟಿ, ಮುಸ್ತಫಾ, ಹಾಫಿಜ್ ರೋಣ, ಅನ್ವರ್‌ಸಾಬ ಮುಳಗುಂದ, ಖಲಿಲ್ ಮುಳಗುಂದ ಮುಂತಾದವರು ಉಪಸ್ಥಿತರಿದ್ದರು.

### ಶ್ರೀ ವಿಶ್ವಮಧ್ವ ಮಹಾಪರಿಷತ್ ಗದಗ ಶಾಖೆ ವತಿಯಿಂದ ಜ.30ರಿಂದ ಕಾರ್ಯಕ್ರಮ

# ಶ್ರೀ ಮನ್ಮಧ್ವ ನವರಾತ್ರೋತ್ಸವ ಇಂದಿನಿಂದ

■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ವಿಶ್ವ ಮಧ್ವಮಹಾಪರಿಷತ್ ಗದಗ ಶಾಖೆ ವತಿಯಿಂದ ಜ. 30ರಿಂದ ಫೆ. 6ರವರೆಗೆ ಗದಗ ನಗರದ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ಶ್ರೀ ಮನ್ಮಧ್ವ ನವರಾತ್ರೋತ್ಸವ ಕಾರ್ಯಕ್ರಮ ಜರುಗಲಿದೆ

ಜ. 30ರ ಬೆಳಿಗ್ಗೆ 7 ಗಂಟೆಗೆ ಶ್ರೀ ಮದಾಚಾರ್ಯರ ಭಾವಚಿತ್ರ ಹಾಗೂ ಸರ್ವಮೂಲ ಗ್ರಂಥಗಳ ಸನ್ನಿಧಿಯಲ್ಲಿ ನಂದಾದೀಪ ಪ್ರಜ್ವಲನೆಯೊಂದಿಗೆ ಕಾರ್ಯಕ್ರಮಗಳು ಪ್ರಾರಂಭವಾಗಲಿದ್ದು, ಸಂಜೆ 6-30ಕ್ಕೆ ಜ್ಞಾನಸತ್ರ ಕಾರ್ಯಕ್ರಮ ನಿಮಿತ್ತ ಧಾರವಾಡದ ಪಂ. ಪುಷ್ಕರಾಚಾರ್ಯ ಶಿರಹಟ್ಟಿ ಇವರಿಂದ ವ್ಯಾಸಾವತಾರ ನಿರ್ಣಯ ವಿಷಯ ಕುರಿತು ಉಪನ್ಯಾಸ ಜರುಗುವುದು.

ಜ. 31ರ ಸಂಜೆ 6-30ಕ್ಕೆ ಭಗವದ್ಗೀತಾ ಚತುರ್ಥಾಧ್ಯಾಯ ವಿಷಯ ಕುರಿತು ಬೆಂಗಳೂರಿನ ಪಂ. ಪುರಂದರಾಚಾರ್ಯ ಹಯಗ್ರೀವ್ ಇವರಿಂದ ಉಪನ್ಯಾಸ ಜರುಗುವುದು. ಫೆ. 1ರ ಸಂಜೆ 6-30ಕ್ಕೆ ಕೃಷ್ಣಾಮೃತ ಮಹಾರ್ಣವ ವಿಷಯ ಕುರಿತು ಪಂ. ರಘೋತ್ತಮಾಚಾರ್ಯ ನಿಲೂಗಲ್ಲ ಅವರಿಂದ ಉಪನ್ಯಾಸ, ಫೆ. 2ರ ಸಂಜೆ 6-30ಕ್ಕೆ ಯಮಕಭಾರತ ವಿಷಯ ಕುರಿತು ಬಾಗಲಕೋಟೆಯ ಪಂ. ರಘೋತ್ತಮಾಚಾರ್ಯ ನಾಗಸಂಪಿಗೆ ಇವರಿಂದ ಉಪನ್ಯಾಸ ಜರುಗುವುದು.

ಫೆ. 5ರ ಬೆಳಿಗ್ಗೆ 6 ಗಂಟೆಗೆ ಶ್ರೀ ಸುಮಧ್ವವಿಜಯ, ಸರ್ವಮೂಲ ಗ್ರಂಥಗಳ ಪಾರಾಯಣ, ವಾಯುಸ್ತುತಿ ಪುನಶ್ಚರಣ ನಂತರ ಸಂಜೆ 6-30ಕ್ಕೆ ಮುಖ್ಯಪ್ರಾಣ ಮಹಿಮಾ ವಿಷಯ ಕುರಿತು ಹುಬ್ಬಳ್ಳಿಯ ಪಂ. ಪಾಂಡುರಂಗಾಚಾರ್ಯ ಹುನಗುಂದ ಇವರಿಂದ ಉಪನ್ಯಾಸ ಜರುಗುವುದು.



ಫೆ. 6ರ ಬೆಳಿಗ್ಗೆ 6 ಗಂಟೆಗೆ ಶ್ರೀ ಸುಮಧ್ವವಿಜಯ, ಸರ್ವಮೂಲ ಗ್ರಂಥಗಳ ಪಾರಾಯಣ, ವಾಯುಸ್ತುತಿ ಪುನಶ್ಚರಣ ಸಹಿತಹೋಮ, ನಂತರ 9 ಗಂಟೆಗೆ ಹರೇಶ್ರೀನಿವಾಸ ಭಜನಾ ಮಂಡಳಿ, ರುಕ್ಮಿಣಿ ಭಜನಾ ಮಂಡಳಿ, ಲಕ್ಷ್ಮೀನಾರಾಯಣ ಭಜನಾ ಮಂಡಳಿ, ಹರಿಪ್ರಿಯಾ ಭಜನಾ ಮಂಡಳಿ, ಸಹಕಾರದಲ್ಲಿ ಶ್ರೀಮದಾಚಾರ್ಯರ ಪ್ರತಿಮೆ ಹಾಗೂ ಸರ್ವಮೂಲ ಗ್ರಂಥಗಳ ಭವ್ಯ ಮೆರವಣಿಗೆ ಜರುಗುವುದು. ನಂತರ ಮಂಗಳಾರತಿ, ಮಂತ್ರಪುಷ್ಪ, ಅಷ್ಟಾವಧಾನ ಸೇವೆ ಜರುಗುವವು.

ಸಂಜೆ 6-30ಕ್ಕೆ ಶ್ರೀ ಮದಾಚಾರ್ಯರ ಸಂದೇಶ ವಿಷಯ ಕುರಿತು ಪಂ. ಶ್ರೀ ವರದರಾಜಾಚಾರ್ಯ ಹುನಗುಂದ ಇವರಿಂದ ಉಪನ್ಯಾಸ ಜರುಗಲಿದ್ದು, ಹುಬ್ಬಳ್ಳಿಯ ಪಂ. ಶ್ರೀ ಪಾಂಡುರಂಗಾಚಾರ್ಯ ಹುನಗುಂದ ಇವರು ಅಧ್ಯಕ್ಷತೆ ವಹಿಸುವರು.

8 ದಿನಗಳ ಕಾಲ ನಡೆಯುವ ಕಾರ್ಯಕ್ರಮವು ಶ್ರೀ ವೀರನಾರಾಯಣ, ಶ್ರೀ ತ್ರಿಕೂಟೇಶ್ವರ ವಿಶ್ವಸ್ಥ ಮಂಡಳಿ, ಶ್ರೀ ರಾಘವೇಂದ್ರಸ್ವಾಮಿ ಉತ್ಸವ ಮಂಡಳ, ಶ್ರೀ ವೀರನಾರಾಯಣ ಯುವಕ ಮಂಡಳ, ಶ್ರೀ ಮಹಾಲಕ್ಷ್ಮಿ ಯುವತಿ ಮಂಡಳ, ಶ್ರೀ ಲಕ್ಷ್ಮೀನಾರಾಯಣ ಮಹಿಳಾ ಮಂಡಳ ಇವರ ಸಹಕಾರದಲ್ಲಿ ಜರುಗಲಿದೆ ಎಂದು ಶ್ರೀ ವಿಶ್ವಮಧ್ವ ಮಹಾಪರಿಷತ್ ಗದಗ ಶಾಖೆ ಪ್ರಕಟಣೆ ತಿಳಿಸಿದೆ.

ಫೆ. 3ರ ಸಂಜೆ 6-30ಕ್ಕೆ ದ್ರೌಪದಿ ಪಂಚಪತಿತ್ವನಿರ್ಣಯ ವಿಷಯ ಕುರಿತು ಧಾರವಾಡದ ಪಂ. ಕೇಶವಾಚಾರ್ಯ ಕೆರೂರ ಇವರಿಂದ ಉಪನ್ಯಾಸ, ಫೆ. 4ರ ಸಂಜೆ 6-30ಕ್ಕೆ ಏಕಾದಶಸ್ಕಂದ ಭಾಗವತ ತಾತ್ಪರ್ಯ ವಿಷಯ ಕುರಿತು ಬೆಂಗಳೂರಿನ ಪಂ. ವಾಸುದೇವಾಚಾರ್ಯ ಸತ್ತಿಗೇರಿ ಇವರಿಂದ ಉಪನ್ಯಾಸ ಜರುಗುವುದು.

# ಇನ್ನರ್ ವ್ಹೀಲ್ ಸಂಸ್ಥಾಪನಾ ದಿನಾಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿಯು ಇನ್ನರ್ ವ್ಹೀಲ್ ಇಂಟರ್ನ್ಯಾಷನಲ್‌ನ 101ನೇ ಸಂಸ್ಥಾಪನಾ ದಿನಾಚಾರಣೆಯನ್ನು ದಾಂಡೇಲಿ ರೆಸಾರ್ಟ್‌ನಲ್ಲಿ ಆಚರಿಸಲಾಯಿತು.


ಸಂಸ್ಥೆಯ ಅಧ್ಯಕ್ಷರಾದ ನಾಗರತ್ನಾ ಮಾರನಬಸರಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ವ್ಯಾಪಾರಿ ಮತ್ತು ಮ್ಯಾಂಚೆಸ್ಟರ್ ರೋಟೇರಿಯನ್ ಅವರ ಪತ್ನಿ ಮಾರ್ಗರೆಟ್ ಗೋಲ್ಡಿಂಗ್ ವೃತ್ತಿಯಲ್ಲಿ ನರ್ಸ್ ಆಗಿದ್ದು, ಇವರು ಇನ್ನರ್ ವೀಲ್ ಸಂಸ್ಥೆಯನ್ನು ಪ್ರಾರಂಭಿಸಿಸಲು ಪ್ರೇರಣೆ ನೀಡಿದರು. ಶತಮಾನದ ಹಿಂದೆ ಪ್ರಾರಂಭವಾದ ಇನ್ನರ್ ವ್ಹೀಲ್ ಸಂಸ್ಥೆಯು ಇಂದು ವಿಶ್ವದ 100ಕ್ಕೂ ಹೆಚ್ಚು ದೇಶಗಳಲ್ಲಿ ಸಂಸ್ಥೆಯನ್ನು ಹೊಂದಿದ್ದು, ಸೇವೆ, ಸ್ನೇಹ ಮತ್ತು ಸೇವೆಯ ಆದರ್ಶಗಳನ್ನು ಪ್ರೋತ್ಸಾಹಿಸುವುದು ಸಂಸ್ಥೆಯ ಉದ್ದೇಶವಾಗಿದೆ ಎಂದರು.

ಸಂಸ್ಥೆಯ ಸದಸ್ಯರಿಗಾಗಿ ಆಯೋಜಿಸಿದ್ದ ಸ್ಪರ್ಧೆಗಳಲ್ಲಿ ವಿಜೇತರಾದ ಆಶಾ ಪಟ್ಟಣಶೆಟ್ಟಿ, ಪುಷ್ಪ ಭಂಡಾರಿ ಮುಂತಾದವರಿಗೆ ಬಹುಮಾನವನ್ನು ವಿತರಿಸಲಾಯಿತು. ಶ್ರೇಯಾ ಪವಾಡಶೆಟ್ಟರ್, ಜ್ಯೋತಿ ದಾನಪ್ಪಗೌಡರ, ಸುಶೀಲಾ ಕೋಟಿ, ಸುಶೀಲಾ ಬಾಗಮಾರ, ಆಶಾ ಹುಕ್ಕೇರಿ, ಸುಮಾ ಪಾಟೀಲ್, ಸಂಧ್ಯಾ ಕೋಟಿ, ಶುಭ ಕುಂದಗೋಳ, ಸುನಂದ ಬೂಮರೆಡ್ಡಿ, ಮೀನಾಕ್ಷಿ ಕೊರವಣ್ಣವರ್, ರೇಖಾ ರೊಟ್ಟಿ, ಉಮಾ ಮುನವಳ್ಳಿ, ಸುವರ್ಣ ಮದರಿಮಠ, ಶಿಲ್ಪಾ ವೀರಲಿಂಗಯ್ಯನಮಠ, ಪುಷ್ಪ ಕೊರವಣ್ಣವರ, ಮೀನಾಕ್ಷಿ ಕೊರವಣ್ಣವರ ಮುಂತಾದವರು ಭಾಗವಹಿಸಿದ್ದರು.

# ಉಚಿತ ಕಣ್ಣಿನ ತಪಾಸಣಾ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಅಂಧತ್ವ ನಿವಾರಣಾ ಸಂಸ್ಥೆ, ಹುಬ್ಬಳ್ಳಿಯ ಎಸ್.ಜಿ.ಎಂ. ನೇತ್ರ ಭಂಡಾರ ಹಾಗೂ ಸಂಶೋಧನಾ ಪ್ರತಿಷ್ಠಾನ, ಗೋಧೋಳಿ ಸಂಸ್ಥೆ, ಎಂ.ಎಂ. ಜೋಶಿ ನೇತ್ರ ವಿಜ್ಞಾನ ಸಂಸ್ಥೆ, ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಸಂಯುಕ್ತ ಆಶ್ರಯದಲ್ಲಿ ಫೆಬ್ರುವರಿ 1ರಂದು ಶನಿವಾರ ಮುಂಜಾನೆ 10ರಿಂದ ಸಂಜೆ 4 ಗಂಟೆಯವರೆಗೆ ಗದಗ-ಬೆಟಗೇರಿಯ ಗಾಂಧಿ ನಗರದ (ಸೆಟ್ಲಮೆಂಟ್) ಸರ್ಕಾರಿ ಶಾಲೆ ನಂ. 5ರಲ್ಲಿ ಉಚಿತ ಕಣ್ಣಿನ ತಪಾಸಣೆ ಮತ್ತು ಶಸ್ತ್ರಚಿಕಿತ್ಸಾ ಶಿಬಿರ ಏರ್ಪಡಿಸಲಾಗಿದೆ.



ಹುಬ್ಬಳ್ಳಿಯ ಗೋಧೋಳಿ ಸಂಸ್ಥೆಯ ಅನನ್ಯ ಆಯಾಚಿತ ಶಿಬಿರವನ್ನು ಆಯೋಜಿಸಿದ್ದು, ಕಣ್ಣಿನ ಪೊರೆ ಬಂದವರಿಗೆ ಮಾತ್ರ ಶಸ್ತ್ರಚಿಕಿತ್ಸೆಗೆ ಆಯ್ಕೆ ಮಾಡಲಾಗುವದು. ಇದು ಧರ್ಮಾರ್ಥ ಉಚಿತ ಶಿಬಿರವಾಗಿದ್ದು, ಅಗತ್ಯವುಳ್ಳವರು-7760864169 ಅಥವಾ 9964729727 ಸಂಖ್ಯೆಯನ್ನು ಸಂಪರ್ಕಿಸಬಹುದು. ಆಪರೇಷನ್‌ಗೆ ಆಯ್ಕೆಯಾದ ಫಲಾನುಭವಿಗಳು ರೇಷನ್ ಕಾರ್ಡ್ ಹಾಗೂ ಮತದಾರರ ಗುರುಚಿನ ಚೀಟಿಯ ಝುರಾಕ್ಸ್ ಪ್ರತಿ ತಪ್ಪದೇ ತರಬೇಕು ಎಂದು ರಮೇಶ ಶಿಗ್ಲಿ ತಿಳಿಸಿದ್ದಾರೆ.

# ಬಿಇಡಿ ಕೋರ್ಸಿನ ಅಭ್ಯರ್ಥಿಗಳ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಎರಡು ವರ್ಷದ ಬಿ.ಇಡಿ ಕೋರ್ಸಿನ ದಾಖಲಾತಿ ಪ್ರವೇಶ ಪ್ರಕ್ರಿಯೆಯ 5ನೇ ಸುತ್ತಿಗೆ ಕಾಲೇಜುಗಳ ಆಯ್ಕೆಗಾಗಿ ಆಪ್ಷನ್ ಎಂಟ್ರಿಗೆ ದಿ:29-01-2025 ರಿಂದ ದಿ:01-02-2025 ವರೆಗೆ ಅವಕಾಶ ನೀಡಿದ್ದು. 5ನೇ ಸುತ್ತಿನ ಸೀಟು ಹಂಚಿಕೆಯನ್ನು ದಿನಾಂಕ:03-02-2025 ರಂದು ಪ್ರಕಟಣೆ ಮಾಡಲಾಗುವುದು.

ಸೀಟು ಹಂಚಿಕೆಯಾದ ಆಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಚಲನ್ ಡೌನಲೋಡ್ ಮಾಡಿಕೊಂಡು ನಿಗದಿತ ದಾಖಲಾತಿ ಶುಲ್ಕವನ್ನು ಫೆಬ್ರವರಿ 5 ರೊಳಗೆ ಎಸ್‌ಬಿಐ ಬ್ಯಾಂಕಿನಲ್ಲಿ ಪಾವತಿಸಿ ಅಭ್ಯರ್ಥಿಗಳು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಕಳಸಾಪುರ ರೋಡ್, ಗದಗ ಇಲ್ಲಿ ಮೂಲ ದಾಖಲೆಗಳೊಂದಿಗೆ ಮತ್ತು ಒಂದು ಸೆಟ್ ಝೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಿ ದಾಖಲೆಗಳ ಪರಿಶೀಲನೆ ಮಾಡಿಸಲು ಈ ಮೂಲಕ ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಿತಿತಿ.ಛಿಠಠಟಜಜಣಭಿಚಿಣಝಠಟ. ಇಚಿಡಿ.ಟಿಛಿಎಟ ಜಾಲತಾಣವನ್ನು ಸಂಪರ್ಕಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಎಂ ಮುಂದಿನಮನಿ ನೋಡಲ್ ಅಧಿಕಾರಿಗಳು ಡಯಟ್ ಗದಗ ಮೊಬೈಲ್ ಸಂ: 7619277145 ಇವರನ್ನು ಸಂಪರ್ಕಿಸಬಹುದಾಗಿದೆ.

### ರಾಮಕೃಷ್ಣ ಮಹಾಸಂಘದ ಪ್ರಥಮ ಅಧ್ಯಕ್ಷರಾದ ಸ್ವಾಮಿ ಬ್ರಹ್ಮಾನಂದರ ಜಯಂತಿ ಸಂಭ್ರಮಾಚರಣೆ ನಾಳೆ

# ಶ್ರೀ ಬ್ರಹ್ಮಚಾರಿ ಅದ್ವೈತ ಚೈತನ್ಯರ ಬೀಳ್ಕೊಡುಗೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ರಾಮಕೃಷ್ಣ ವಿವೇಕಾನಂದ ಆಶ್ರಮ ಹಾಗೂ ರಾಮಕೃಷ್ಣ ವಿವೇಕಾನಂದ ಸೇವಾ ಪ್ರತಿಷ್ಠಾನಂ ಹುಲಕೋಟಿ ಇವರ ಸಹಯೋಗದಲ್ಲಿ ರಾಮಕೃಷ್ಣ ಮಹಾಸಂಘದ ಪ್ರಥಮ ಅಧ್ಯಕ್ಷರಾದ ಸ್ವಾಮಿ ಬ್ರಹ್ಮಾನಂದರ ಜಯಂತಿ ಸಂಭ್ರಮಾಚರಣೆ ಹಾಗೂ ಬ್ರಹ್ಮಚಾರಿ ಆಶ್ರಮದಿಂದ ಸನ್ಯಾಸ ಸ್ವೀಕರಿಸಲು ಹಿಮಾಚಲದೆಡೆಗೆ ಪ್ರಯಾಣಿಸುತ್ತಿರುವ ಶ್ರೀ ಬ್ರಹ್ಮಚಾರಿ ಅದ್ವೈತ ಚೈತನ್ಯ (ಪುನೀತ್ ಮಹಾರಾಜ್) ಇವರಿಗೆ ಬೀಳ್ಕೊಡುಗೆ ಕಾರ್ಯಕ್ರಮವನ್ನು ಜ.31ರಂದು ಸಂಜೆ 5ರಿಂದ 8.30ರವರೆಗೆ ಗದಗ ಜಿಲ್ಲಾಡಳಿತ ಭವನದ ಮುಂಭಾಗದಲ್ಲಿರುವ ಪಂ. ಭೀಮಸೇನ್ ಜೋಶಿ ರಂಗಮಂದಿರದಲ್ಲಿ ಏರ್ಪಡಿಸಲಾಗಿದೆ.

ಕಾರ್ಯಕ್ರಮದಲ್ಲಿ ಬೆಂಗಳೂರಿನ ಕೈಲಾಸಾಶ್ರಮ ಮಹಾ ಸಂಸ್ಥಾನದ ಪೀಠಾಧಿಪತಿ ವಿಜಯೇಂದ್ರ ಪುರಿ ಮಹಾಸ್ವಾಮಿಗಳು, ಗದಗ-ವಿಜಯಪುರ ರಾಮಕೃಷ್ಣ ವಿವೇಕಾನಂದ ಆಶ್ರಮದ ಅಧ್ಯಕ್ಷ ಸ್ವಾಮಿ ನಿರ್ಭಯಾನಂದ ಸರಸ್ವತಿ ಶ್ರೀಗಳು, ತುಮಕೂರು ಆಶ್ರಮದ ಅಧ್ಯಕ್ಷ ಸ್ವಾಮಿ ವಿರೇಶಾನಂದ ಸರಸ್ವತಿ, ಧಾರವಾಡ ಆಶ್ರಮದ ಅಧ್ಯಕ್ಷ ಸ್ವಾಮಿ ವಿಜಯಾನಂದ ಸರಸ್ವತಿ, ಬೆಳಗಾವಿ ನಿಡಸೋಶಿಯ ದುರದುಂಡೇಶ್ವರ ಸಿದ್ಧ ಸಂಸ್ಥಾನ ಮಠದ ಉತ್ತರಾಧಿಕಾರಿ ನಿಜಲಿಂಗೇಶ್ವರ ಮಹಾಸ್ವಾಮಿ, ರಾಣೆಬೆನ್ನೂರು ಸ್ವಾಮಿ ಪ್ರಕಾಶನಂದಿಜಿ ಮಹಾರಾಜ್, ಹೊಸಪೇಟೆಯ ಸ್ವಾಮಿ ಸುಮೇದಾನಂದಜಿ ಮಹಾರಾಜ್, ಬೀದರ್‌ನ ಸ್ವಾಮಿ ಜ್ಯೋತಿರ್ಮಯಾನಂದಜಿ ಮಹಾರಾಜ್, ಗದಗಿನ ಸ್ವಾಮಿ ಜಗನ್ನಾಥಾನಂದಜಿ ಮಹಾರಾಜ್, ಯಲಹಂಕದ ಸ್ವಾಮಿ ಅಭಿಯಾನಂದಜಿ ಮಹಾರಾಜ್, ರಾಮನಗರ ಜಿಲ್ಲೆಯ ಕುದೂರಿನ ಸ್ವಾಮಿ ಪರಮಾನಂದಜಿ ಮಹಾರಾಜ್, ರಾಣೇಬೆನ್ನೂರಿನ ಸ್ವಾಮಿ ಆತ್ಮದೀಪಾನಂದಜಿ ಮಹಾರಾಜ್, ಹುಬ್ಬಳ್ಳಿಯ ಸ್ವಾಮಿ ತೇಜ ಸಾನಂದಜಿ ಮಹಾರಾಜ್ ಅವರುಗಳು ಸಾನಿಧ್ಯ ವಹಿಸುವರು.

ಮುಖ್ಯ ಅತಿಥಿಗಳಾಗಿ ರೋಣ ಶಾಸಕ ಜಿ.ಎಸ್. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಮಾಜಿ ಸಚಿವ ಬಿ.ಆರ್. ಯಾವಗಲ್, ಮಾಜಿ ಶಾಸಕ ಡಿ.ಆರ್. ಪಾಟೀಲ, ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ್ ಬಬಲೇಶ್ವರ, ಡಿಐಜಿ ರವಿ ಚನ್ನಣ್ಣವರ, ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಪ್ರಭಾರ ಕುಲಪತಿ ಪ್ರೊ. ಸುರೇಶ್ ನಾಡಗೌಡರ, ಗದಗ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ ಉಪಸ್ಥಿತಿ ವಹಿಸುವರು.

> ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅಧ್ಯಕ್ಷತೆ ವಹಿಸುವರು. ಸಂಸದ ಬಸವರಾಜ ಬೊಮ್ಮಾಯಿ ಅವರು ಕಾರ್ಯಕ್ರಮ ಉದ್ಘಾಟಿಸುವರು.

ವಿಶೇಷ ಆಹ್ವಾನಿತರಾಗಿ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಪ್ರೊ. ವಿಷ್ಣುಕಾಂತ್ ಎಸ್.ಚಟಪಲ್ಲಿ ಹಾಗೂ ಹುಬ್ಬಳ್ಳಿಯ ಎಂ.ಎಂ. ಜೋಶಿ ಕಣ್ಣಿನ ಆಸ್ಪತ್ರೆಯ ವೈದ್ಯ ಡಾ. ಎ.ಎಸ್. ಗುರುಪ್ರಸಾದ್ ಆಗಮಿಸುವರು.

ಅತಿಥಿಗಳಾಗಿ ಗುರಣ್ಣ ಬಳಗಾನೂರ, ಶ್ರೀನಿವಾಸ್ ದ್ಯಾವನೂರ್, ಜೆ.ಕೆ. ಜಮಾದಾರ, ವಿದ್ಯಾಧರ ದೊಡ್ಮನಿ, ವಾಸಣ್ಣ ಕುರಡಗಿ, ಶ್ರೀನಿವಾಸ ಹುಯಿಲಗೋಳ, ಹನುಮಂತಪ್ಪ ವೈ.ಪೂಜಾರ, ಬಸವರಾಜ್ ಚಿಕ್ಕಟ್ಟಿ, ರವಿ ಮೂಲಿಮನಿ, ಡಾ. ಕುನಾಲ್ ಆಳ್ಳೊಳ್ಳಿ, ಕೃಷ್ಣಗೌಡ ಪಾಟೀಲ, ಶಿವಕುಮಾರ್ ಶಿವನಗುತ್ತಿ, ವಿವೇಕ್ ಯಾವಗಲ್, ಪುನೀತ್ ಕುಮಾರ್ ಬೆನಕನವಾರಿ, ಸಿದ್ದಲಿಂಗೇಶ್ವರ ಪಾಟೀಲ, ರಾಮಚಂದ್ರ ಕುಲಕರ್ಣಿ, ಈಶಣ್ಣ ಹುಣಸಿಕಟ್ಟಿ, ಚಂದ್ರು ಹುಣಸಿಕಟ್ಟಿ, ಪ್ರಶಾಂತ್ ಜೆ.ಸಿ. ಪಾಲ್ಗೊಳ್ಳುವರು.

### ಮಹಿಳಾ ಸಹಕಾರ ಸಂಘಗಳ ಅಧ್ಯಕ್ಷರು, ಕಾರ್ಯನಿರ್ವಾಹಕರುಗಳಿಗೆ ಒಂದು ದಿನದ ವಿಶೇಷ ತರಬೇತಿ

# ತರಬೇತಿಯೊಂದಿಗೆ ಆರ್ಥಿಕ ಸದೃಢತೆ ಹೊಂದಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು ಹಾಗೂ ಗದಗ ಜಿಲ್ಲಾ ಸಹಕಾರ ಯೂನಿಯನ್ ಇವರುಗಳ ಸಂಯುಕ್ತ ಆಶ್ರಯದಲ್ಲಿ ಗದಗ ಜಿಲ್ಲೆಯ ಎಲ್ಲಾ ಮಹಿಳಾ ಸಹಕಾರ ಸಂಘಗಳ ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ಒಂದು ದಿನದ ವಿಶೇಷ ತರಬೇತಿ ಶಿಬಿರವನ್ನು ರೋಟರಿ ಕಮ್ಯುನಿಟಿ ಕೇರ್ ಸೆಂಟರ್ ಸಭಾಭವನದಲ್ಲಿ ಜರುಗಿತು.




ಕಾರ್ಯಕ್ರಮದ ಉದ್ಘಾಟನೆಯನ್ನು ಸಹಕಾರ ಸಂಘಗಳ ಉಪನಿಬಂಧಕಿ ಎಸ್.ಎಸ್. ಕಬಾಡೆ ನೆರವೇರಿಸಿ ಮಾತನಾಡುತ್ತಾ, ಸ್ತ್ರೀಯರು ಸರ್ಕಾರದ ಹಾಗೂ ಈ ಕಾರ್ಯಕ್ರಮದ ಹಲವಾರು ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ಅದಕ್ಕಾಗಿ ನೀಡಲಾಗುವ ತರಬೇತಿಗಳನ್ನು ಪಡೆದು, ಬದುಕಿನಲ್ಲಿ ಆರ್ಥಿಕ ಸದೃಢತೆ ಹೊಂದಬೇಕು. ಇದರಿಂದ ಕುಟುಂಬ ನಿರ್ವಹಣೆಗೆ ಸಹಾಯವಾಗಲಿದೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಸಹಕಾರ ಹಾಲು ಉತ್ಪಾದಕರ ಮಹಾಮಂಡಳದ ನಿರ್ದೇಶಕ ಎಚ್.ಜಿ. ಹಿರೇಗೌಡ್ರ ಮಾತನಾಡುತ್ತಾ, ಮಹಿಳೆಯರು ತಮ್ಮ ಕುಶಲತೆಗೆ ಸಂಬಂಧಿಸಿದ ಆಸಕ್ತಿಯುಳ್ಳ ವಿವಿಧ ತರಬೇತಿಗಳನ್ನು ಪಡೆದು ಸಣ್ಣ ಬಂಡವಾಳದಿಂದ ಉದ್ಯಮ ಪ್ರಾರಂಭಿಸಿ. ಸ್ವ-ಉದ್ಯೋಗದ ತರಬೇತಿಗಳು ಉದ್ಯಮಶೀಲತೆಗೆ ಸಹಕಾರ ನೀಡುತ್ತವೆ. ಗ್ರಾಹಕರನ್ನು ಆಕರ್ಷಿಸಲು ಪರಿಣಾಮಕಾರಿಯಾದ ಮಾರ್ಕೆಟಿಂಗ್ ಅವಶ್ಯ. ಅದಕ್ಕಾಗಿ ಸ್ವ-ಉದ್ಯೋಗದಾತರು ಗ್ರಾಹಕರೊಂದಿಗೆ ಸೌಮ್ಯವಾಗಿ ವರ್ತಿಸಿ ವ್ಯಾಪಾರವನ್ನು ವೃದ್ಧಿಸಿಕೊಳ್ಳಬೇಕು ಎಂದರು.

ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ಉಪನಿರ್ದೇಶಕ ಅರವಿಂದ ಎನ್. ನಾಗಜ್ಜನವರ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಸಿ.ಎಂ. ಪಾಟೀಲ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಸಹಕಾರಿ ಪ್ರಮುಖರಾದ ಅನಿತಾ ಕಲ್ಲಣ್ಣವರ, ಪ್ರಶಾಂತ ಮುಧೋಳ, ಪ್ರಕಾಶ ನವಲಗುಂದ, ಎಚ್.ಎಂ. ಶಾಂತಾ, ಡಾ. ಪ್ರಸನ್ನ ಪಟ್ಟೇದ, ಶಾಂತವ್ವ ರಾಚನಗೌಡ್ರ, ವಿಜಯಲಕ್ಷ್ಮೀ ರಾಮೇನಹಳ್ಳಿ, ಗಿರಿಜವ್ವ ಹಡಪದ, ಜಯಮ್ಮ ತಂತ್ರಿ ಶಿವಲೀಲಾ ಹಿರೇಮಠ ಉಪಸ್ಥಿತರಿದ್ದರು.

> ಧಾರವಾಡ ಹಾಲು ಒಕ್ಕೂಟದ ನಿರ್ದೇಶಕ ಲಿಂಗರಾಜಗೌಡ ಎಚ್.ಪಾಟೀಲ ಮಾತನಾಡುತ್ತಾ, ಸ್ವಾವಲಂಬನೆ, ಸಬಲೀಕರಣ ಇವು ಸಹಕಾರಿ ವಲಯದ ಮುಲಭೂತ ಆಶಯಗಳಾಗಿವೆ. ಸಹಕಾರಿ ಉದ್ಯಮಗಳಲ್ಲಿ ಮಹಿಳೆಯರು ಪಾಲ್ಗೊಂಡರೆ, ಅವರು ಸಾಮಾಜಿಕವಾಗಿ, ಆರ್ಥಿಕವಾಗಿ ಸಬಲರಾಗುವುದರಲ್ಲಿ ಯಾವುದೇ ಸಂಶಯವಿಲ್ಲ ಎಂದರು.

ತರಬೇತಿ ಕಾರ್ಯಾಗಾರದಲ್ಲಿ ಮಹಿಳೆಯರು ಆರ್ಥಿಕವಾಗಿ ಸಬಲರಾಗಲು ಅಳವಡಿಸಿಕೊಳ್ಳಬೇಕಾದ ಕೌಶಲ್ಯಗಳು ಮತ್ತು ಮಾರುಕಟ್ಟೆ ವ್ಯವಸ್ಥೆ ಹಾಗೂ ಮಹಿಳೆಯರಿಗೆ ಸರ್ಕಾರದಿಂದ ಸಿಗುವ ಆರ್ಥಿಕ ಸೌಲಭ್ಯಗಳ ಕುರಿತು ಡಾ. ಜಯಶ್ರೀ ಬಿ.ಹಿರೇಮಠ, ಮಹಿಳೆಯರ ಆರೋಗ್ಯ ಕುರಿತು ಕೆ.ಎ. ಹಾದಿಮನಿ, ಸಹಕಾರ ಸಂಘಗಳಲ್ಲಿ ಆಡಳಿತಾತ್ಮಕ ನಿರ್ವಹಣೆ ಕುರಿತು ಡಿ.ಐ. ನದಾಫ್ ಉಪನ್ಯಾಸ ನೀಡಿದರು.

ಗಿರಿಜಾ ನಾಯಕ ಪ್ರಾರ್ಥಿಸಿದರು. ಚಂದ್ರಶೇಖರ ಎಸ್.ಕರಿಯಪ್ಪನವರ ಸ್ವಾಗತಿಸಿ ನಿರೂಪಿಸಿದರು. ರಶೀದಾಬಾನು ಸಿ.ಯಲಿಗಾರ ವಂದಿಸಿದರು.

# ನೇಕಾರರ ಸೌಲಭ್ಯಕ್ಕಾಗಿ ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ನೇಕಾರ ಸೇವಾ ಸಂಘ ಹಾಗೂ ಗದಗ-ಬೆಟಗೇರಿ ವೃತ್ತಿಪರ ನೇಕಾರರು ಜಿಲ್ಲಾಧಿಕಾರಿಗಳಿಗೆ ಹಾಗೂ ಜಿಲ್ಲಾಧಿಕಾರಿಗಳ ಮೂಲಕ ಜವಳಿ ಮತ್ತು ಸಕ್ಕರೆ ಸಚಿವ ಶಿವಾನಂದ ಪಾಟೀಲ್ ಅವರಿಗೆ ಮನವಿ ಸಲ್ಲಿಸಿದರು.

ರಾಜ್ಯದ ವೃತ್ತಿಪರ ನೇಕಾರರಿಗೆ ಪ್ರತಿ ವರ್ಷದಂತೆ ನೇಕಾರ ಸಮ್ಮಾನ್ ಯೋಜನೆ ಸಹಾಯಧನ ಇನ್ನೂ ಸಂದಾಯವಾಗದೆ ಸರಕಾರ ವಿಳಂಬ ನೀತಿ ಅನುಸರಿಸುತ್ತಿದ್ದು, ಕೂಡಲೇ ಹಣ ಸಂದಾಯ ಮಾಡಬೇಕು. ಅಸಂಘಟಿತ ಕಾರ್ಮಿಕರ ಗುರುತಿನ ಚೀಟಿಯನ್ನು ಶೀಘ್ರವೇ ಹಂಚಿಕೆ ಮಾಡಬೇಕು. ಕಟ್ಟಡ ಕಾರ್ಮಿಕ ಮಾದರಿಯಲ್ಲಿ ಕಟ್ಟಕಡೆಯ ನೇಕಾರನಿಗೂ ಸೌಲಭ್ಯಗಳು ದೊರೆಯುವಂತಾಗಬೇಕು. ಮುಂಬರುವ ಬಜೆಟ್‌ನಲ್ಲಿ ಕೈಮಗ್ಗ ಮತ್ತು ಜವಳಿ ಇಲಾಖೆಗೆ 1500 ಕೋಟಿ ರೂಪಾಯಿಗಳ ವಿಶೇಷ ಅನುದಾನ ಒದಗಿಸಬೇಕು ಎಂದು ಸರ್ಕಾರಕ್ಕೆ ಒತ್ತಾಯಿಸಲಾಯಿತು.

ಈ ಸಂದರ್ಭದಲ್ಲಿ ವಿರುಪಾಕ್ಷ ಐಲಿ, ರಾಜು ದಡಿ, ಬಸವರಾಜ ಕರಿ, ನಾರಾಯಣ ಗೋಟೂರ, ರಾಘು ನೀಲಿ, ರಾಘು ಗೋಟೂರ, ಈರಣ್ಣ ಕೋನಾ, ನಾರಾಯಣಪ್ಪ ಕ್ವಾಣಿ ಹಾಗೂ ಗದಗ-ಬೆಟಗೇರಿಯ ವೃತ್ತಿಪರ ನೇಕಾರರು ಇದ್ದರು.

# ಪೊಲೀಸರಿಂದ ಕೋಡ್ ರೆಡ್ ನಾಕಾಬಂದಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ನಿರ್ದೇಶನದಂತೆ ಶಿರಹಟ್ಟಿ ಪೊಲೀಸರಿಂದ ಕೋಡ್ ರೆಡ್ ನಾಕಾಬಂದಿ ವ್ಯವಸ್ಥೆ ಜಾರಿಗೊಳಿಸಿ ವಾಹನ ತಪಾಸಣೆ ನಡೆಸಲಾಗುತ್ತಿದೆ.



ಈ ಸಂದರ್ಭದಲ್ಲಿ ಮಾತನಾಡಿದ ಶಿರಹಟ್ಟಿ ಸಿಪಿಐ ನಾಗರಾಜ ಮಾಢಳ್ಳಿ, ಪಿಎಸ್‌ಐ ಚನ್ನಯ್ಯ ದೇವೂರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ನಿರ್ದೇಶನದಂತೆ ಶಿರಹಟ್ಟಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಶಿರಹಟ್ಟಿಯ ನೆಹರು ವೃತ್ತ ಹಾಗೂ ನೆಲೋಗಲ್ ಬಳಿ ಮತ್ತು ಲಕ್ಷ್ಮೇಶ್ವರ ಠಾಣಾ ವ್ಯಾಪ್ತಿಯಲ್ಲಿ ಸವಣೂರು ಕ್ರಾಸ್ ಮತ್ತು ಗದಗ ಕ್ರಾಸ್‌ಗಳಲ್ಲಿ ಕೋಡ್ ರೆಡ್ ನಾಕಾಬಂದಿ ಮಾಡಲಾಗಿದೆ. ಈ ನಾಲ್ಕು ನಾಕಾಬಂದಿಗಳಲ್ಲಿ ಅಗತ್ಯ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಲಾಗಿದ್ದು, ವಿಜಿಬಲ್ ಪೊಲೀಸಿಂಗ್ ವ್ಯವಸ್ಥೆಯನ್ನು ನಿರ್ವಹಿಸಲಿದ್ದಾರೆ.

ಅಪರಾಧ ಪ್ರಕರಣಗಳ ಸಂಖ್ಯೆಯನ್ನು ಕಡಿಮೆ ಮಾಡುವುದು, ಸಂಚಾರಿ ನಿಯಮಗಳ ಪಾಲನೆ, ಸಂಶಯಾಸ್ಪದವಾಗಿ ಸಂಚರಿಸುವ ವಾಹನಗಳ ತಪಾಸಣೆ ಮಾಡುವುದರ ಜೊತೆಗೆ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗುವವರನ್ನು ಶೀಘ್ರವೇ ಪತ್ತೆ ಹಚ್ಚುವ ಕೆಲಸ ಇದಾಗಿದೆ ಎಂದರು.

# ಡಿ.ಪಿ.ಇ.ಪಿ ಶಾಲೆಯಲ್ಲಿ ಗಣರಾಜ್ಯೋತ್ಸವ ಆಚರಣೆ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಮಾರುತಿ ನಗರದ ಸರಕಾರಿ ಹಿರಿಯ ಪ್ರಾಥಮಿಕ(ಡಿ.ಪಿ.ಇ.ಪಿ) ಶಾಲೆಯಲ್ಲಿ 76ನೇ ಗಣರಾಜ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.

ಎಸ್.ಡಿ.ಎಂ.ಸಿ ಅಧ್ಯಕ್ಷ ಮಹಾಂತೇಶ ಗುರಿಕಾರ ಧ್ವಜಾರೋಹಣ ನೆರವೇರಿಸಿದರು. ನಂತರ ನಡೆದ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮವನ್ನು ಹರ್ಲಾಪೂರ ಕೊಟ್ಟೂರೇಶ್ವರ ಮಠದ ಡಾ. ಕೊಟ್ಟೂರೇಶ್ವರ ಶ್ರೀಗಳು ಉದ್ಘಾಟಿಸಿ ಮಾತನಾಡುತ್ತಾ, ಮಕ್ಕಳು ರಾಷ್ಟ್ರಾಭಿಮಾನದೊಂದಿಗೆ ಸ್ಪರ್ಧಾತ್ಮಕ ಮನೋಭಾವನೆ ಬೆಳೆಸಿಕೊಳ್ಳಬೇಕು. ಪಾಲಕರು ಮಕ್ಕಳ ಬಗ್ಗೆ ಕಾಳಜಿ ವಹಿಸಿ ಪೂರಕ ಕಲಿಕಾ ವಾತವಾರಣ, ಟಿ.ವಿ., ಮೊಬೈಲ್‌ನ ಗೀಳು ತಪ್ಪಿಸಬೇಕು. ಶಿಕ್ಷಕರ ಮಾರ್ಗದರ್ಶನದಂತೆ ಶಿಕ್ಷಣ ದಿನಚರಿಯನ್ನು ರೂಢಿಸಬೇಕು ಎಂದರು.

ಶಾಲೆಗೆ ವಿವಿಧ ವಸ್ತುಗಳನ್ನು ದೇಣಿಗೆ ನೀಡಿದ ಚನ್ನಪ್ಪ ಹಡಗಲಿ ಹಾಗೂ ವಿನಾಯಕ ಡಿಗ್ಗಾವಿ ಅವರನ್ನು ಸನ್ಮಾನಿಸಲಾಯಿತು. ಕಳೆದ ವರ್ಷ 7ನೇ ತರಗತಿಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಪುರಸ್ಕರಿಸಲಾಯಿತು.

ಮುಖ್ಯೋಪಾಧ್ಯಾಯ ಕೆ.ಬಿ. ಕೊಣ್ಣೂರು ವರದಿ ವಾಚನ ಮಂಡಿಸುತ್ತಾ, 234 ಮಕ್ಕಳಲ್ಲಿ 210 ಮಕ್ಕಳನ್ನು ಕಾರ್ಯಕ್ರಮದಲ್ಲಿ ತೊಡಗಿಸಿ ಸರಕಾರದ ಎಲ್ಲಾ ಯೋಜನೆಗಳನ್ನು ಸಮರ್ಪಕವಾಗಿ ಮಕ್ಕಳಿಗೆ ನೀಡುತ್ತಿರುವುದು ಸಂತೋಷ ನೀಡಿದೆ. ಕ್ರೀಯಾಶೀಲ ಎಸ್.ಡಿ.ಎಂ.ಸಿ, ಗ್ರಾ.ಪಂಗಳ ಸಹಕಾರದಿಂದ ಶಾಲೆಯ ವಿವಿಧ ಅಭಿವೃದ್ಧಿ ಕಾರ್ಯಗಳು ಪ್ರಾಮಾಣಿಕವಾಗಿ ನಡೆದಿವೆ ಎಂದರು.

ಗ್ರಾ.ಪಂ ಸದಸ್ಯರಾದ ಲಕ್ಷ್ಮಣ ಗುಡಸಲಮನಿ, ಶಿವಪ್ಪ ಬಳಿಗೇರ, ಶಾಂತಮ್ಮ ಮಣಕವಾಡ, ಎಸ್.ಡಿ.ಎಂ.ಸಿ ಪದಾಧಿಕಾರಿಗಳು, ಪಾಲಕರು, ಶಿಕ್ಷಕರು ಉಪಸ್ಥಿತರಿದ್ದರು. ಮಹಾಲಕ್ಷ್ಮಿ ದೊಡ್ಡಮನಿ ಸ್ವಾಗತಿಸಿದರು. ಅಶ್ವಿನಿ ಕೆ.ವಿ ನಿರೂಪಿಸಿ ವಂದಿಸಿದರು.

# ಗ್ಯಾಸ್ ಸೋರಿಕೆಯ ಅರಿವು ಮೂಡಿಸುವುದು ಅವಶ್ಯ

▸▸ಮೊದಲನೇ ಪುಟದಿಂದ

ಎಂಬುದನ್ನು ಸಹ ತಿಳಿಯಪಡಿಸಲಾಗಿದೆ ಎಂದು ಅವರು ತಿಳಿಸಿದರು.

ರೈತರು ಕೃಷಿ ಭೂಮಿಯಲ್ಲಿ ಬೋರ್‌ವೆಲ್ ಕೊರೆಸುವಾಗ ಗ್ಯಾಸ್ ಪೈಪ್‌ಲೈನ್ ಒಡೆಯುವ ಸಾಧ್ಯತೆ ಹೆಚ್ಚಾಗಿರುತ್ತದೆ. ಅಲ್ಲದೇ ಚರಂಡಿ, ವಿದ್ಯುತ್ ಕಂಬ ಅಳವಡಿಕೆ ಹಾಗೂ ಇತರೆ ಪೈಪ್‌ಲೈನ್ ಕಾಮಗಾರಿಗಳನ್ನು ಕೈಗೊಳ್ಳುವಾಗಲೂ ಸಹ ಗ್ಯಾಸ್ ಪೈಪ್‌ಲೈನ್ ಒಡೆಯಬಹುದಾಗಿದೆ. ಹೀಗಾಗಿ ವಿವಿಧ ಇಲಾಖೆಗಳ ಅಧಿಕಾರಿಗಳು, ರೈತ ಸಂಘಟನೆಗಳು ಹಾಗೂ ಜನರಿಗೆ ಅರಿವು ಮೂಡಿಸುವುದು ಅವಶ್ಯಕವಾಗಿದೆ ಎಂದು ಹೇಳಿದರು.

ಜಿಎಐಎಲ್ ಇಂಡಿಯಾ ಲಿಮಿಟೆಡ್‌ನ ಪ್ರಧಾನ ವ್ಯವಸ್ಥಾಪಕರಾದ ಸುಮಿತ ಶ್ರೀವಾಸ್ತವ ಮಾತನಾಡಿ, ಮಹಾರಾಷ್ಟ್ರದ ದಾಭೋಲ್‌ನಿಂದ ಕರ್ನಾಟಕದ ಬೆಂಗಳೂರಿನವರೆಗೆ ನೈಸರ್ಗಿಕ ಅನಿಲ ಪೈಪ್‌ಲೈನ್ ಅಳವಡಿಸಲಾಗಿದೆ. ಮಹಾರಾಷ್ಟ್ರ, ಗೋವಾ ಮತ್ತು ಕರ್ನಾಟಕ ರಾಜ್ಯಗಳಲ್ಲಿ ಹಾದು ಹೋಗಿದೆ. ಇದು ಸುಮಾರು 1100 ಕಿ.ಮೀ.ವರೆಗೆ ಕರ್ನಾಟಕದಲ್ಲಿದೆ. ಧಾರವಾಡ ಜಿಲ್ಲೆಯಲ್ಲಿ ಸರಿಸುಮಾರು 140 ಕಿ.ಮೀ.ನಷ್ಟು ಅಳವಡಿಸಲಾಗಿದೆ. ಸಾರ್ವಜನಿಕರ ಹಿತದೃಷ್ಟಿಯಿಂದ ಗ್ಯಾಸ್ ಸೋರಿಕೆ ಕುರಿತು ಅಣುಕು ಪ್ರದರ್ಶನವನ್ನು ಏರ್ಪಡಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಎಐಎಲ್ ಇಂಡಿಯಾ ಲಿಮಿಟೆಡ್, ಅಗ್ನಿ ಶಾಮಕ ದಳ, ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ ಹಾಗೂ ವಿವಿಧ ಇಲಾಖೆಗಳು ಅಣುಕು ಪ್ರದರ್ಶನದಲ್ಲಿ ಭಾಗವಹಿಸಿದ್ದವು.

ಕಾರ್ಯಕ್ರಮದಲ್ಲಿ ಅಣ್ಣಿಗೇರಿ ತಹಸೀಲ್ದಾರ ಮಂಜುನಾಥ ದಾಸಪ್ಪನವರ, ನವಲಗುಂದ ತಹಸೀಲ್ದಾರ ಸುಧೀರ ಸಾಹುಕಾರ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಭಾಗ್ಯಶ್ರೀ ಜಹಗೀರದಾರ್, ಜಿಎಐಎಲ್ ಇಂಡಿಯಾ ಲಿಮಿಟೆಡ್‌ನ ಪ್ರಧಾನ ವ್ಯವಸ್ಥಾಪಕ ಪಿ. ನಂದಗೋಪಾಲ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಗ್ರಾಮಸ್ಥರು ಉಪಸ್ಥಿತರಿದ್ದರು.

### ನಗರಸಭೆಯ ನೂತನ ಆಯುಕ್ತ ರಾಜಾರಾಮ ಪವಾರರಿಗೆ ಸನ್ಮಾನ

# ಜನರ ನಿರೀಕ್ಷೆಗೂ ಮೀರಿ ಕೆಲಸ ಮಾಡುವೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಿಬ್ಬಂದಿಗಳ ಸಹಕಾರ-ವಿಶ್ವಾಸದೊಂದಿಗೆ ಸಾರ್ವಜನಿಕರ ಕುಂದು-ಕೊರತೆಗಳನ್ನು ನಿಗದಿತ ಕಾಲದದೊಳಗೆ ಪರಿಹರಿಸುವುದಾಗಿ ನಗರಸಭೆ ನೂತನ ಆಯುಕ್ತ ರಾಜಾರಾಮ ಪವಾರ ಹೇಳಿದರು.



ಅವರು ಸಭಾಪತಿ ಬಸವರಾಜ ಹೊರಟ್ಟಿಯವರ ಹಿತೈಷಿ ಬಳಗದಿಂದ ಸನ್ಮಾನ ಸ್ವೀಕರಿಸಿ ಮಾತನಾಡಿ, ನಗರಸಭೆಗೆ ಸಾರ್ವಜನಿಕರು ಸಮಸ್ಯೆಯನ್ನು ಹೊತ್ತು ಬಂದಾಗ ತಕ್ಷಣ ಸ್ಪಂದಿಸುವ ವಾತಾವರಣವನ್ನು ನಿರ್ಮಿಸುವುದರ ಜೊತೆಗೆ ನಗರಸಭೆಯ ಬಗ್ಗೆ ಹಾಗೂ ನಮ್ಮ ಸಿಬ್ಬಂದಿಯವರ ಬಗ್ಗೆ ಹೆಚ್ಚು ವಿಶ್ವಾಸ ಮೂಡುವಂತೆ ಪ್ರಯತ್ನಿಸುವ ಭರವಸೆಯನ್ನು ಗದಗ ಜನತೆಗೆ ನೀಡುವೆ ಎಂದರು.

ದಾಂಡೇಲಿಯಲ್ಲಿ ಅವರು ಕೆಲಸ ಮಾಡುವಾಗ ಸಭಾಪತಿ ಬಸವರಾಜ ಹೊರಟ್ಟಿಯವರು ನೀಡಿದ ಸಹಕಾರ ಮಾರ್ಗದರ್ಶನವನ್ನು ನೆನೆಸಿಕೊಂಡರಲ್ಲದೆ , ಮುಂದೆಯೂ ಅವರ ಸಹಕಾರವನ್ನು ಬಯಸುತ್ತೇನೆ. ನಾನು ಇಲ್ಲಿಯೇ ಕೆಲಸ ಮಾಡಿ ಹೋಗಿರುವುದರಿಂದ ನನ್ನ ಎಲ್ಲ ಸಿಬ್ಬಂದಿ ಕಾರ್ಯಕ್ಷಮತೆಯ ಬಗ್ಗೆ ನನಗೆ ಗೊತ್ತಿದೆ. ಆ ಆತ್ಮವಿಶ್ವಾಸದೊಂದಿಗೆ ನಗರಸಭೆಗೆ ಕಳೆಗಟ್ಟುವ ಕೆಲಸವನ್ನು ಮಾಡುತ್ತೇನೆಂದು ಹೇಳಿದರು.

ಡಾ.ಬಸವರಾಜ ಧಾರವಾಡ ಆಯುಕ್ತರನ್ನು ಸನ್ಮಾನಿಸಿ ಮಾತನಾಡಿ, ಗದಗ-ಬೆಟಗೇರಿ ನಗರಸಭೆಗೆ ತನ್ನದೇ ಆದ ಇತಿಹಾಸವಿದೆ.

ಜೊತೆಗೆ ಗದಗ ಜನತೆಯ ಆಶೋತ್ತರಗಳಿಗೆ ನಗರಸಭೆ ಸ್ಪಂದಿಸುವ ಮೂಲಕ ಸಾರ್ವಜನಿಕರನ್ನು ನಿತ್ಯ ಅಲೆದಾಡದಂತೆ ಮಾಡುವಲ್ಲಿ ನೂತನ ಆಯುಕ್ತರು ವಿಶೇಷ ಕಾಳಜಿ ವಹಿಸಲಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಾಮಾಜಿಕ ಕಾರ್ಯಕರ್ತ ವಿಜಯ ಮುಳಗುಂದ, ಪರಿಸರ ಇಂಜಿನಿಯರ್ ಆನಂದ ಬದಿ, ನಗರಸಭೆ ವ್ಯವಸ್ಥಾಪಕರಾದ ಪರಶುರಾಮ ಶೇರಖಾನೆ, ಎಮ್.ಎ. ಮುಜಾವರ, ಸಿ.ಬಿ. ಆರಾಧ್ಯಮಠ, ಮಹೇಶ ನೀಲಗುಂದ, ತಿರುಪತಿ ದ್ಯಾವನೂರ ಸೇರಿದಂತೆ ನಗರಸಭೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.



ಮುಂಡರಗಿ ತಾಲೂಕಿನ ಹಳ್ಳಿಕೇರಿಯ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ ಸಾವಿತ್ರಿ ಕಲ್ಲಳ್ಳಿ ಗದಗ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ಕನ್ನಡ ಕವನ ವಾಚನ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾಳೆ. ಗದಗ ಜಿಲ್ಲಾ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರಡಿ ಪ್ರಶಸ್ತಿ ಪತ್ರ ವಿತರಿಸಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎಮ್. ಪಡ್ನೇಶಿ, ಎಚ್.ಎನ್. ನಾಯಕ, ಮುತ್ತು ಮಾದರ, ಶ್ರೀಮತಿ ಹುಲಕೋಟಿ, ಬಿ.ವಾಯ್. ಡೊಳ್ಳಿನ, ಶ್ರೀಮತಿ ಕುಂಬಾಳವತಿ ಇದ್ದರು.



ಲಕ್ಕುಂಡಿಯಲ್ಲಿ ಭೋವಿ ಸಮಾಜದ ವತಿಯಿಂದ ಸಿದ್ರಾಮೇಶ್ವರ ಸಮುದಾಯ ಭವನದಲ್ಲಿ ಶಿವ ಶರಣ ಸಿದ್ರಾಮೇಶ್ವರ ಜಯಂತಿಯನ್ನು ಆಚರಿಸಲಾಯಿತು.

**ಗಜೇಂದ್ರಗಡದ ಅನ್ನದಾನೇಶ್ವರ ಪಿಯು ಕಾಲೇಜಿನ 'ಗುರುಕೃಪಾ' ಕಾರ್ಯಕ್ರಮದಲ್ಲಿ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು**

# ಶಿಕ್ಷಣದಲ್ಲಿ ಮಾನವೀಯ ಗುಣಗಳನ್ನು ಅಳವಡಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ವಿದೇಶಗಳಲ್ಲಿ ಆಧ್ಯಾತ್ಮಕ್ಕೆ ಒಂದು ದಿನ, ಒಂದು ವಾರವೆಂದು ಮೀಸಲಿದ್ದರೆ, ಭಾರತೀಯರ ಎಲ್ಲಾ ಸಂಸ್ಕೃತಿಯಲ್ಲಿ, ನಿತ್ಯ ವ್ಯವಹಾರದಲ್ಲಿ ಆಧ್ಯಾತ್ಮ ಅಡಗಿದೆ. ಹಾಗಾಗಿ ಭಾರತವು ಜಗತ್ತಿನಲ್ಲಿಯೇ ಶ್ರೇಷ್ಠ ದೇಶವಾಗಿದೆ ಎಂದು ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಅಧ್ಯಕ್ಷರಾದ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಹೇಳಿದರು.

ಗಜೇಂದ್ರಗಡ ನಗರದ ಪುರ್ತಗೇರಿ ಕ್ರಾಸ್ ಬಳಿ ಇರುವ ಶ್ರೀ ಅನ್ನದಾನೇಶ್ವರ ಪದವಿಪೂರ್ವ ಮಹಾವಿದ್ಯಾಲಯದ ಆವರಣದಲ್ಲಿ ಬುಧವಾರ ಸಂಜೆ ನಡೆದ 2024-25ನೇ ಸಾಲಿನ ವಿವಿಧ ಸಾಂಘಿಕ ಚಟುವಟಿಕೆಗಳ ಸಮಾರೋಪ ಸಮಾರಂಭ ಹಾಗೂ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಬೀಳ್ಕೊಡುವ 'ಗುರುಕೃಪಾ-2025' ಕಾರ್ಯಕ್ರಮದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಗುರು ಎಂದರೆ ಅಜ್ಞಾನ ನಿವಾರಕ, ಕತ್ತಲೆಯಿಂದ ನೆಳಕಿನಡೆಗೆ ಕರೆದುಕೊಂಡು ಹೋಗುವ ಸಾಧಕನಾಗಿದ್ದಾನೆ. ನಮ್ಮ ಅರಿವು ನಮಗೆ ಮಾರ್ಗದರ್ಶನ ನೀಡಿದರೆ ಅದೇ ಗುರುವಾಗಿದೆ. ಶಿಕ್ಷಣದ ಜೊತೆಗೆ ಸಮಾಜದಲ್ಲಿ



ನಮ್ಮ ಕರ್ತವ್ಯವೇನು, ನೈತಿಕ ಹೊಣೆ ಏನು ಎಂಬುದು ಗೊತ್ತಿರಬೇಕು. ಆದ್ದರಿಂದ ಶಿಕ್ಷಣ ಪಡೆಯುವ ಪ್ರತಿ ವಿದ್ಯಾರ್ಥಿಯೂ ಮಾನವೀಯ ಸಾಮಾನ್ಯ ಗುಣಗಳನ್ನು ಹೊಂದಬೇಕು. ಗುಣಮಟ್ಟದ ಶಿಕ್ಷಣವನ್ನು ಪಡೆಯಲು ದೂರದ ಮಂಗಳೂರು, ಬೆಂಗಳೂರಿಗೆ ಹೋಗುವ ಅವಶ್ಯಕತೆ ಇಲ್ಲ. ನಮ್ಮ ಶ್ರೀಮಠದ ಸಂಸ್ಥೆಯಿಂದ ಸ್ಥಳೀಯವಾಗಿಯೇ ಕೊಡುತ್ತಿದ್ದು, ಅದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾಲೇಜಿನ ಚೇರಮನ್ ವಿ.ವಿ. ವಸ್ತ್ರದ ಮಾತನಾಡಿ, ವಿದ್ಯಾರ್ಥಿಗಳು ಚೆನ್ನಾಗಿ ಓದಿ ಸಾಧನೆ ಮಾಡಿ ಉತ್ತಮ ಭವಿಷ್ಯ ರೂಪಿಸಿಕೊಂಡು ಕಾಲೇಜಿನ ಹಾಗೂ ತಂದೆ-ತಾಯಿಗಳ ಕೀರ್ತಿಯನ್ನು ಹೆಚ್ಚಿಸಬೇಕು. ಕಳೆದ ವರ್ಷ ನಮ್ಮ ಕಾಲೇಜು ಜಿಲ್ಲಾಮಟ್ಟದಲ್ಲಿ ಉತ್ತಮ ಫಲಿತಾಂಶ ನೀಡಿದೆ. ಈ ಬಾರಿ ಉಪನ್ಯಾಸಕರು, ವಿದ್ಯಾರ್ಥಿಗಳು ಪರೀಕ್ಷೆಗೆ ತಕ್ಕ ಯೋಜನೆ ಸಿದ್ಧಪಡಿಸಿ ಕಾರ್ಯನಿರ್ವಹಿಸಬೇಕು ಹಾಗೂ ರಾಜ್ಯಮಟ್ಟದ ಸಾಧನೆ ಮಾಡಬೇಕು ಎಂದು ಸಲಹೆ ನೀಡಿದರು.

ಪಿಯು ಕಾಲೇಜಿನ ಪ್ರಾಚಾರ್ಯ ವಸಂತರಾವ್ ಗಾರಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರನ್ನು, ವಿವಿಧ ವಿಭಾಗಗಳಲ್ಲಿ ಪ್ರಶಸ್ತಿ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ನಂತರ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಈ ವೇಳೆ ಶೈಕ್ಷಣಿಕ ಸಲಹೆಗಾರರಾದ ಬಿ.ಎಸ್. ಗೌಡರ, ಶಿವಾನಂದ ಮಠದ, ಆಡಳಿತ ಮಂಡಳಿ ಸದಸ್ಯರಾದ ಸದಾಶಿವ ಕರಡಿ, ಮುದಕಪ್ಪ ತೊಂಡಿಹಾಳ, ನರೇಗಲ್ ಎಸ್.ಎ. ಪಿಯು ಕಾಲೇಜಿನ ಚೇರಮನ್ ಎಂ.ಜಿ. ಸೋಮನಕಟ್ಟಿ, ಕಿವುಡ ಮಕ್ಕಳ ವಸತಿಯುತ ಶಾಲೆಯ ಚೇರಮನ್ ಎಸ್.ಕೆ. ರೇವಡಿ, ಅನ್ನದಾನೇಶ್ವರ ಆಂಗ್ಲ ಮಾಧ್ಯಮ ಶಾಲೆಯ ಚೇರಮನ್ ಪಿ.ಎನ್. ಚವಡಿ, ಐಟಿಐ ಕಾಲೇಜಿನ ಚೇರಮನ್ ಎಸ್.ಸಿ. ಚಕ್ಕಡಿಮಠ, ಕುಮಾರೇಶ್ವರ ವಾಣಿಜ್ಯ ಪದವಿ ಕಾಲೇಜಿನ ಆಡಳಿತ ಮಂಡಳಿ ಸದಸ್ಯ ಎಂ.ಬಿ. ಪಾಟೀಲ, ಪ್ರಾಚಾರ್ಯ ಬಿ.ಎಸ್. ಹಿರೇಮಠ ಇದ್ದರು.

ವಿಶೇಷ ಉಪನ್ಯಾಸ ನೀಡಿದ ಬೆಳಗಾವಿಯ ಸಾಹಿತಿ ಡಾ. ರಾಜಶೇಖರ ಬಿರಾದಾರ, ವಿದ್ಯಾರ್ಥಿ ದಿಸೆಯಲ್ಲಿ ಪಡೆಯುವ ಜ್ಞಾನವು ವ್ಯಕ್ತಿಯ ವ್ಯಕ್ತಿತ್ವವನ್ನು ರೂಪಿಸುವಲ್ಲಿ ಮುಖ್ಯವಾಗಿರುತ್ತದೆ. ಹೀಗಾಗಿ ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಶಿಸ್ತು ಹಾಗೂ ಉತ್ತಮ ನಡವಳಿಕೆಗಳನ್ನು ಅಳವಡಿಸಿಕೊಳ್ಳಬೇಕು. ಶೈಕ್ಷಣಿಕ ಜೀವನದಲ್ಲಿ ವಿದ್ಯಾರ್ಥಿಗಳು ಹೊಸತನದ ಅನ್ವೇಷಣೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

# ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟನೆ

■ವಿಜಯಸಾಕ್ಷಿ ಸುದ್ದಿ, ಗದಗ

ಉತ್ತರ ಕರ್ನಾಟಕದ ಗ್ರಾಮೀಣ ಭಾಗಕ್ಕೆ ತಾಂತ್ರಿಕ ಶಿಕ್ಷಣದಲ್ಲಿ ಹೆಸರುವಾಸಿಯಾಗಿ 40 ವರ್ಷಗಳಿಂದ ಸುದೀರ್ಘ ಸೇವೆ ಸಲ್ಲಿಸುತ್ತಿರುವ ಅಂಜುಮನ್-ಎ-ಇಸ್ಲಾಂ ಪಾಲಿಟೆಕ್ನಿಕ್‌ನಲ್ಲಿ ವಿ.ಪ ಸದಸ್ಯರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನದಲ್ಲಿ ಒದಗಿಸಿರುವ ಶುದ್ಧ ಕುಡಿಯುವ ನೀರಿನ ಘಟಕವನ್ನು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದಲ್ಲಿ ತಾಂತ್ರಿಕ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳು ಮತ್ತು ಸಂಸ್ಥೆಯ




ಸಿಬ್ಬಂದಿಗಳು ಶುದ್ಧ ನೀರಿನ ಉಪಯೋಗ ಪಡೆದುಕೊಳ್ಳಬೇಕು. ಮನುಷ್ಯನ ದೇಹದಲ್ಲಿ ಕಲುಷಿತ ನೀರಿನಿಂದ ಶೇ.80ರಷ್ಟು ರೋಗಗಳು ಬರುತ್ತವೆ. ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜೊತೆಗೆ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕೆಂದು ತಿಳಿಸಿದರು.

ವೈದ್ಯಕೀಯ ಸಮಾಲೋಚನೆ ಮತ್ತು ಪ್ರಥಮ ಚಿಕಿತ್ಸಾ ಘಟಕವನ್ನು ಗದಗಿನ ಖ್ಯಾತ ವೈದ್ಯರಾದ ಡಾ. ಶ್ರೀಧರ ಕುರಡಗಿ ಉದ್ಘಾಟಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಕಾರ್ಯದರ್ಶಿ ಖಲೀಕ ಅಹಮದ ಮುಲ್ಲಾ ವಹಿಸಿದ್ದರು. ಸಂಸ್ಥೆಯ ಡಿ.ಎಂ. ಕೊಪ್ಪಳ, ಎಮ್.ಐ. ಕಮಾನಗಾರ, ಶಬ್ಬಿರ ಅಬ್ಬಿಗೇರಿ, ಎ.ಎಮ್. ಮಿಶ್ರಿಕೋಟಿ ಉಪಸ್ಥಿತರಿದ್ದರು.

ಪ್ರಾಚಾರ್ಯ ಕಿಶೋರ ಎನ್.ರೇವಣಕರ ಪ್ರಾಸ್ತಾವಿಕ ನ್ಮಡಿಗಳನ್ನಾಡಿದರು. ಅಂಜುಮನ-ಎ-ಇಸ್ಲಾಂ ಪಾಲಿಟೆಕ್ನಿಕ್, ಕರ್ನಾಟಕ ಪದವಿಪೂರ್ವ ಕಾಲೇಜು, ಅಂಜುಮನ ಇಸ್ಲಾಂ ಐ.ಟಿ.ಐ.ಗಳ ಬೋಧಕ, ಬೋಧಕೇತರ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಆರ್.ಸಿ. ಕೋಟಿ ಸ್ವಾಗತಿಸಿದರು. ಕುಮಾರಸ್ವಾಮಿ ಟಿ.ಹೆಚ್. ನಿರೂಪಿಸಿದರು. ಎಸ್.ಎ. ತಡೂಳ ವಂದಿಸಿದರು

# ಬಂಜಾರ ಕಲಾವಿದರಿಂದ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ತಾಂಡಾ ಅಬಿವೃದ್ಧಿ ನಿಗಮವು ತಾಂಡಾಗಳಿಗೆ ಮೂಲಭೂತ ಸೌಲಭ್ಯವನ್ನು ಒದಗಿಸುವುದರ ಜೊತೆಗೆ ಬಂಜಾರ ಸಮುದಾಯದ ಆರ್ಥಿಕ, ಸಾಮಾಜಿಕ , ಶೈಕ್ಷಣಿಕ ಮತ್ತು ಸಾಂಸ್ಕೃತಿಕ, ಅಭಿವೃದ್ಧಿಗಾಗಿ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ. ಬಂಜಾರರ ಸಾಂಪ್ರದಾಯಿಕ ಸಂಸ್ಕೃತಿ ಮತ್ತು ಕಲೆಗಳನ್ನು ಉಳಿಸಿ, ಬೆಳೆಸಿ ಪುನಶ್ಚೇತನಗೊಳಿಸುವ ಉದ್ದೇಶದಿಂದ ಮತ್ತು ಬಂಜಾರ ಕಲಾವಿದರ ಪ್ರತಿಭೆಯನ್ನು ಹೊರ ಹೊಮ್ಮಿಸಲು ಬಂಜಾರರ ಬಹುಮುಖ ಕಲಾ ಪ್ರತಿಭಾನ್ವೇಷಣೆ ಕಲಾ ಮಳಾವೋ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಬಂಜಾರರ ಸಮುದಾಯದ ಬಹುಮುಖ ಕಲಾ ಪ್ರಕಾರಗಳಾದ ವಾಜಾ ವಾದ್ಯ ಕಲೆ, ಕಥನ ಗಾಯನ ( ಸಣ್ಣ ವಾಜಾ), ಲೆಂಗಿ ನೃತ್ಯ, ನಂಗಾರಾ ಢೋಳಿ ಬಿಡಿಸುವ ನೃತ್ಯ, ಮಹಿಳೆಯರ ಸಾಂಪ್ರದಾಯಿಕ ನೃತ್ಯ, ಘೂಮರ್ ನೃತ್ಯ, ಮಹಿಳೆಯರ ಜಾನಪದ ನೃತ್ಯ, ಮಹಿಳೆಯರ ಸಾಂಪ್ರದಾಯಿಕ ಗಾಯನ ಮತ್ತು ನೃತ್ಯ, ಬಂಜಾರ ಸುಗಮ ಸಂಗೀತ, ಬಾಲಕಿಯರ ನೃತ್ಯ, ಬಾಲಕರ ಲೆಂಗಿ ನೃತ್ಯ, ಬಾಲಕರ ಮತ್ತು ಬಾಲಕಿಯರ ಆಧುನೀಕ ನೃತ್ಯ , ಮಹಿಳೆಯರ ಹವೆಲ ಮತ್ತು ಡಾವಲೋ ಪ್ರಕಾರಗಳಲ್ಲಿ ಬಂಜಾರ ಸಮುದಾಯದ ಕಲಾವಿದರು ಭಾಗವಹಿಸಿ ಪ್ರಶಸ್ತಿ ಪಡೆಯಲು ಬಂಜಾರ ಕಲಾವಿದರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜನವರಿ 30 ಕೊನೆಯ ದಿನವಾಗಿದ್ದು, ಅರ್ಜಿಯನ್ನು ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತ ವಲಯ ಕಚೇರಿ ಕೊಪ್ಪಳ ಇಲ್ಲಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತ ವಲಯ ಕಚೇರಿ ಕೊಪ್ಪಳ ದೂರವಾಣಿ ಸಂಖ್ಯೆ 08539-220842 ಸಂಪರ್ಕಿಸಬಹುದಾಗಿದೆ.


## ಗ್ರಾಮ ಪಂಚಾಯತ,ಕಾರ್ಯಾಲಯ, ಬೆಳಹೋಡ

ತಾಲೂಕ ; ಗದಗ ಜಿಲ್ಲಾ:-ಗದಗ

ಸಂ.ಗ್ರಾ.ಪಂಹೆ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿನಾಂಕ:-29/01/2025

### ః ದರಪಟ್ಟಿ ಪ್ರಕಟಣೆ ః

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತಿ ಬೆಳಹೋಡ ಇವರು 2024-25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರಂಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 01 | ಎಚ್ ಎಸ್ ವೆಂಕಟಾಪೂರ ಗ್ರಾಮದ 2 ನೇ ಪ್ಲಾಟ ನಂ ಸರಕಾರಿ ರಸ್ತೆಗೆ ಸಿ ಸಿ ರಸ್ತೆ ನಿರ್ಮಾಣ | 1576575 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 02 | ಬೆಳಹೋಡ ಗ್ರಾಮದ ಇಲಿಯಾಸ ಹೊಂಬಳ ಮನೆಯಿಂದ ಮಹ್ಮದಲಿ ಹೊಂಬಳ ಮನೆವರೆಗೆ ಸಿ ಸಿ ರಸ್ತೆ ಅಭಿವೃದ್ಧಿ ಪಡಿಸುವುದು | 111678 | 500 | |
| 03 | ಎಚ್ ಎಸ್ ವೆಂಕಟಾಪೂರ ಗ್ರಾಮದ 2 ನೇ ಪ್ಲಾಟಿನಲ್ಲಿ ಯಲ್ಲಮ್ಮ ತಳವಾರ ಮನೆಯಿಂದ ಸರಕಾರಿ ರಸ್ತೆ ವರೆಗೆ ಗಟಾರ ನಿರ್ಮಾಣ | 116646 | 500 | |
| 04 | ಬೆಳಹೋಡ ಗ್ರಾಮದ ಪಶು ದವಾಖಾನೆಯಿಂದ ಹೊಂಬಳ ಮೇನ್ ರಸ್ತೆಯವರೆಗೆ 2 ಬದಿ ಚರಂಡಿ ನಿರ್ಮಾಣ | 275081 | 500 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ: 30/01/2025 ರಿಂದ 08/02/2025 ರವರೆಗೆ ಖಾಲಿ ದರಪಟ್ಟಿ ಫಾರಂ ನೀಡುವ ದಿನಾಂಕ: 08/02/2025, ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ: 08/02/2025 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.00 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ: 09/02/2025 ರ ಮಧ್ಯಾಹ್ನ 4.00 ಗಂಟೆ

ನಿಬಂಧನೆಗಳು : 1)ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಬೆಳಹೋಡ ಯಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ ಆಗಿದೆ/-
**ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
**ಗ್ರಾಮ ಪಂಚಾಯತಿ ಬೆಳಹೋಡ**

ಸಹಿ ಆಗಿದೆ/-
**ಅಧ್ಯಕ್ಷರು**
**ಗ್ರಾಮ ಪಂಚಾಯತಿ ಬೆಳಹೋಡ**


# ನೂತನ ಪದಾಧಿಕಾರಿಗಳಿಗೆ ಸನ್ಮಾನ




■ವಿಜಯಸಾಕ್ಷಿ ಸುದ್ದಿ, ಗದಗ

ದಿ ಆಝಾದ್ ಕೋ-ಆಪರೇಟಿವ್ ಬ್ಯಾಂಕ್‌ನ ಗದಗ ನಿರ್ದೇಶಕ ಮಂಡಳಿಯ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಅಲ್ಹಾಜ್ ಸರ್ಫರಾಜ್ ಅಹ್ಮದ್ ಉಮಚಗಿ ಅವರಿಗೆ ಮತ್ತು ಉಪಾಧ್ಯಕ್ಷರಾಗಿ ಆಯ್ಕೆಯಾದ ಹುಲಗಣ್ಣ ಬಳ್ಳಾರಿ ಅವರಿಗೆ ಇಮಾಮ ಖಾಸಿಂ ಸೆಂಟ್ರಿಂಗ್ ಪ್ಲೇಟ್ ಸಂಸ್ಥೆಯ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಇಮಾಮ ಖಾಸಿಂ ಸೆಂಟ್ರಿಂಗ್ ಪ್ಲೇಟ್ ಸಂಸ್ಥೆಯ ಅಧ್ಯಕ್ಷ ಅಬ್ದುಲ್ ಮುನಾಫ್ ಮುಲ್ಲಾ, ಗದಗ-ಬೆಟಗೇರಿ ನಗರಸಭೆ ಸದಸ್ಯರಾದ ಪರವೀನ್ ಬಾನು ಅಬ್ದುಲ್ ಮುನಾಫ್ ಮುಲ್ಲಾ, ಆಝಾದ್ ಬ್ಯಾಂಕ್ ಮ್ಯಾನೇಜರ್ ರಜಾಕ್ ಯಾರಗುಡಿ, ಖಾಸಿಮ ಸಾಬ್ ಇರಕಲ್, ಗಣ್ಯ ಉದ್ಯಮಿಗಳಾದ ಎಚ್.ಕೆ. ಮುಲ್ಲಾ, ಫಯಾಜ್ ಖಾಜಿ, ಕೆಪಿಸಿಸಿ ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮುಸ್ಕಾನ ಖಾಜಾಹುಸೇನ್ ಸಯ್ಯದ್, ಸಾಹೇರಾಬಾನು ಬಳ್ಳಾರಿ, ಮಹಿಳಾ ಕಾಂಗ್ರೆಸ್ ಅಧ್ಯಕ್ಷರಾದ ವಿಜಯಲಕ್ಷ್ಮೀ ಹಳಿಯಾಳ, ಬ್ಯಾಂಕಿನ ಸಿಬ್ಬಂದಿ ಹಾಗೂ ಗ್ರಾಹಕರು ಉಪಸ್ಥಿತರಿದ್ದರು.

# ಶ್ರೀ ಗೌರಮ್ಮದೇವಿ ದೇವಸ್ಥಾನ ಲೋಕಾರ್ಪಣೆ ಇಂದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದ ಪೇಠಬಣದಲ್ಲಿ ಪುರಾತನ ಇತಿಹಾಸವನ್ನು ಹೊಂದಿರುವ ಶಿಥಿಲಗೊಂಡಿದ್ದ ಶ್ರೀ ಗೌರಮ್ಮದೇವಿ ದೇವಸ್ಥಾನವು ನೂತನವಾಗಿ ಮರುನಿರ್ಮಾಣಗೊಂಡಿದ್ದು, ದೇವಸ್ಥಾನ ಲೋಕಾರ್ಪಣೆ ಹಾಗೂ ಶ್ರೀ ಗೌರಮ್ಮದೇವಿ ಮೂರ್ತಿಯ ಪ್ರಾಣ ಪ್ರತಿಷ್ಠಾಪನೆಯ ಕಾರ್ಯಕ್ರಮವು ಜ.30ರಂದು ಮುಂಜಾನೆ 5.30ರಿಂದ ಪ್ರಾರಂಭಗೊಳ್ಳಲಿದೆ. ಪಟ್ಟಣದ ಪೇಠಬಣದಲ್ಲಿದ್ದ ಶ್ರೀ ಗೌರಮ್ಮದೇವಿ ದೇವಸ್ಥಾನವು ಹಳೆಯ ಕಟ್ಟಡವಾಗಿದ್ದು, ಶಿಥಿಲಗೊಂಡಿತ್ತು. ಈ ದೇವಸ್ಥಾನವನ್ನು ಜೀರ್ಣೋದ್ಧಾರಗೊಳಿಸುವ ನಿಟ್ಟಿನಲ್ಲಿ ಓಣಿಯ ಹಿರಿಯರು, ಯುವಕರು ಸೇರಿ ಸಂಘಟನೆಯ ಮೂಲಕ ಸುಂದರವಾದ ದೇವಸ್ಥಾನವನ್ನು ನಿರ್ಮಾಣ ಮಾಡಿ ಮತ್ತೆ ಜಾಗೃತ ಸ್ಥಳವನ್ನು ಆಕರ್ಷಣೀಯವಾಗಿ ಸಿದ್ಧಗೊಳಿಸಿದ್ದಾರೆ. ಶ್ರೀ ಗೌರಮ್ಮದೇವಿಯ ಮಂದಿರ ಪ್ರವೇಶ ಮತ್ತು ದೇವಿಯ ಮೂರ್ತಿ ಪ್ರತಿಷ್ಠಾಪನೆಯನ್ನು ಪಟ್ಟಣದ ಕರೇವಾಡಿಮಠದ ಶ್ರೀ ಮಳೆ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳ ಸಾನಿಧ್ಯ ಹಾಗೂ ಮಾಜಿ ಶಾಸಕ ಜಿ.ಎಸ್. ಗಡ್ಡದ್ದೇವರಮಠ ಇವರ ಉಪಸ್ಥಿತಿಯಲ್ಲಿ ಜ.30ರ ಬೆಳಿಗ್ಗೆ 5-30ಕ್ಕೆ ಗಂಗಾ ದೇವತಾ ಪೂಜೆಯೊಂದಿಗೆ ಮಂದಿರ ಪ್ರವೇಶ ಹಾಗೂ ಗಣಪತಿ ಪೂಜೆ, ನವಗ್ರಹ ಶಾಂತಿ, ದುರ್ಗಾ ಹೋಮ, ಶಾಂತಿ ಪೂಜೆ ನಂತರ ಗೌರಮ್ಮದೇವಿಯ ಮೂರ್ತಿಯು ವಾದ್ಯ ಮೆರವಣಿಗೆಯೊಂದಿಗೆ ದೇವಾಲಯಕ್ಕೆ ಪ್ರವೇಶವಾಗಲಿದೆ. ಜ.31ರ ಬೆಳಿಗ್ಗೆ 8-30ರಿಂದ 9-30ರವರೆಗೆ ಶ್ರೀ ಗೌರಮ್ಮದೇವಿಗೆ ಮಹಾ ಪ್ರಾಣ ಪ್ರತಿಷ್ಠಾಪನೆ, ಕಳಸಾರೋಹಣ ಮತ್ತು ಮಹಾಮಂಗಳಾರತಿ ನೆರವೇರಿಸಲಾಗುವುದು ಎಂದು ಸಂಘದ ಡಿ.ಎಚ್. ಪಾಟೀಲ ತಿಳಿಸಿದ್ದಾರೆ.

**ಬಿಗ್‌ಬಾಸ್ 11ರ ವಿಜೇತ ಹನುಮಂತ ಲಮಾಣಿ ಭಾವಚಿತ್ರಕ್ಕೆ ಕ್ಷೀರಾಭಿಷೇಕ**

# ಉತ್ತರ ಕರ್ನಾಟಕದ ಪ್ರತಿಭೆಗೆ ಮೆಚ್ಚುಗೆ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಬೆಳದಡಿ ಗ್ರಾಮದ ಬ್ರಹ್ಮಾನಂದಪುರ ತಾಂಡಾದಲ್ಲಿ ಕಲರ್ಸ್ ಕನ್ನಡ ವಾಹಿನಿಯ ಬಿಗ್‌ಬಾಸ್ 11ನೇ ಆವೃತ್ತಿಯಲ್ಲಿ ವಿಜಯಶಾಲಿಯಾಗಿ ಉತ್ತರ ಕರ್ನಾಟಕದ ಕೀರ್ತಿಯನ್ನು ಹೆಚ್ಚಿಸಿದ ಹನುಮಂತ ಲಮಾಣಿ ಅವರ ಭಾವಚಿತ್ರಕ್ಕೆ ಶ್ರೀಸೇವಾಲಾಲ್ ಯುವಕ ಮಂಡಳದವರು ಕ್ಷೀರಾಭಿಷೇಕ ಮಾಡಿ ಸಂಭ್ರಮಿಸಿದರು.

ಬ್ರಹ್ಮಾನಂದಪುರ ತಾಂಡದ ಶ್ರೀಸೇವಾಲಾಲ್ ಯುವಕ ಮುಂಡಳ, ನಾಗಾವಿ ಗ್ರಾಮದ ಸೋಮೇಶ ಹಿರೇಮಠ ಪ್ರತಿಷ್ಠಾನದವರು ಹಾವೇರಿ-ಗದಗ ಲೋಕಸಭಾ ಮತಕ್ಷೇತ್ರದ ಸಂಸದರಾದ ಬಸವರಾಜ ಬೊಮ್ಮಾಯಿ ಅವರ ಜನ್ಮದಿನವನ್ನು




ವಿದ್ಯಾರ್ಥಿಗಳಿಗೆ ಸಿಹಿ ಹಂಚುವ ಮೂಲಕ ಆಚರಿಸಿದರು.

ನಾಗಾವಿ ಗ್ರಾಮದ ಸೋಮೇಶ ಹಿರೇಮಠ ಪ್ರತಿಷ್ಠಾನದ ಅಧ್ಯಕ್ಷ ಬಸವಣ್ಣೆಯ್ಯಸ್ವಾಮಿ ಹಿರೇಮಠ ಮಾತನಾಡಿ, ಕನ್ನಡ ಚಿತ್ರರಂಗದ ಪ್ರಾರಂಭದಲ್ಲಿ ಉತ್ತರ ಕರ್ನಾಟಕದ ಹೆಸರಾಂತ ರಂಗಭೂಮಿ ಕಲಾವಿದರಾದ ಯಲಿವಾಳ ಸಿದ್ದಯ್ಯನವರು ಕೃಷ್ಣಗಾರುಡಿ, ಜಗಜ್ಯೋತಿ ಬಸವೇಶ್ವರ ಚಲನಚಿತ್ರದಲ್ಲಿ ಪಾತ್ರಗಳನ್ನು ನಿರ್ವಹಿಸಿದ್ದರು. ವೈಜನಾಥ್ ಬಿರಾದರ್ ಸೇರಿದಂತೆ ಸಂಗೀತ ಕ್ಷೇತ್ರದಲ್ಲಿ ಗಂಗೂಬಾಯಿ ಹಾನಗಲ್, ಭೀಮ್‌ಸೇನ್ ಜೋಶಿ, ಪುಟ್ಟರಾಜ ಕವಿ ಗವಾಯಿಗಳು ಉತ್ತರ ಕರ್ನಾಟಕದ ಕಲೆ ಹಾಗೂ ಸಂಗೀತದ ಕೀರ್ತಿಯನ್ನು ಬಾನೆತ್ತರಕ್ಕೆ ಬೆಳಗಿಸಿದ್ದಾರೆ ಎಂದರು.

ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಹನುಮಂತ ಲಮಾಣಿ, ಸದಸ್ಯರಾದ ವಿಠ್ಠಲ ತೋಟದ, ಬಿಜೆಪಿ ಮುಖಂಡರಾದ ಮಂಜುನಾಥ ಹಳ್ಳೂರಮಠ ಮಾತನಾಡಿ, ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರು ಕೈಗೊಂಡ ಅಭಿವೃದ್ಧಿಪರ ಕಾರ್ಯಗಳನ್ನು ಶ್ಲಾಘಿಸಿದರಲ್ಲದೇ, ಜನಪದ ಸಾಹಿತ್ಯವನ್ನು ಲೋಕಕ್ಕೆ ಪರಿಚಯಿಸಿ ಗಮನ ಸೆಳೆದ ಹನಮಂತ ಲಮಾಣಿ ಅವರಿಗೆ ಶುಭ ಕೋರಿದರು.

ಬೆಂಗಳೂರಿನ ವಿವಿಧ ಟಿವಿ ಚಾನೆಲ್‌ಗಳು ಇತ್ತೀಚೆಗೆ ಉತ್ತರ ಕರ್ನಾಟಕದ ಪ್ರತಿಭೆಗಳಿಗೆ ಅವಕಾಶ ಮಾಡಿಕೊಡುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದು ಅವರು ಹೇಳಿದರು.

ತಾ.ಪಂ ಮಾಜಿ ಸದಸ್ಯರಾದ ಕಮಲಾ ಟಿ.ಪೂಜಾರ್ ಅಧ್ಯಕ್ಷತೆ ವಹಿಸಿದ್ದರು. ಮುಖಂಡರಾದ ಟಿ.ಡಿ. ಪೂಜಾರ ನೇತೃತ್ವ ವಹಿಸಿದ್ದರು. ಗ್ರಾ.ಪಂ ಸದಸ್ಯರಾದ ಭೋಜಪ್ಪ ಲಮಾಣಿ, ಮುಖಂಡರುಗಳಾದ ಗೋಪಾಲ ನಾಯಕ, ರಮೇಶ ಲಮಾಣಿ, ಕೃಷ್ಣಪ್ಪ ಜಾಧವ, ಶೀಲವ್ವ ಚವ್ಹಾಣ, ಹೇಮವ್ವ ಚವ್ಹಾಣ, ಉಮಾ ಲಮಾಣಿ, ಮಹಾಂತೇಶ ಚವ್ಹಾಣ, ಲಾಲಪ್ಪ ಬಡಿಗೇರ, ಮಹಾದೇವ ಮಕ್ಕೊಜಿ, ಪ್ರಕಾಶ ಅರ್ಕಸಾಲಿ ಸೇರಿದಂತೆ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ದೇವೇಂದ್ರ ತೋಟದ ಸ್ವಾಗತಿಸಿದರು, ಮೋತಿಲಾಲ ಚನ್ನಳ್ಳಿ ವಂದಿಸಿದರು.


**ಕರ್ನಾಟಕ ಸರಕಾರ (ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ)**
**ಜಂಟಿ ನಿರ್ದೇಶಕರು ಜಿಲ್ಲಾ ಕೈಗಾರಿಕಾ ಕೇಂದ್ರ ಇವರ ಕಛೇರಿ**
**ಕೊಠಡಿ ಸಂ. 221, 2ನೇ ಮಹಡಿ, ಜಿಲ್ಲಾ ಆಡಳಿತ ಭವನ,**
**ಗದಗ-582103 ದೂರವಾಣಿ : 08372-230771, 231398**
**Mail : jd-gadag@karnatakaindustry.gov.in**
**Mail : jddicgadag@gmail.com**

ಕ್ರ.ಸಂ. ಗದಗ/ಜಿಕೈಕೇ/ವಾ.ಟೆಂ/2024-25 ದಿನಾಂಕ : 28.01.2025

**ಟೆಂಡರ್ ಪ್ರಕಟಣೆ**

ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಗದಗ ಇವರ ಉಪಯೋಗಕ್ಕಾಗಿ 2025-26ನೇ ಸಾಲಿಗೆ (ದಿ : 01.04.2025 ರಿಂದ 31.03.2026 ರವರೆಗೆ) ಮಾಸಿಕ ಬಾಡಿಗೆ ಆಧಾರದ ಮೇಲೆ 2023 ಹಾಗೂ 2024 ರ ನೊಂದಾಯಿತ ತತ್ಸಮಾನ ಮಾಡೆಲ್ ಹೊಂದಿದ ಒಂದು ಎ.ಸಿ. ವಾಹನವನ್ನು ಪಡೆಯಲು ದ್ವಿ-ಲಕೋಟೆ ಪದ್ಧತಿ ಮೂಲಕ ಟೆಂಡರನ್ನು ಕರೆಯಲಾಗಿದ್ದು, ವಿವರ ಈ ಕೆಳಗಿನಂತಿದೆ.

(01) ಖಾಲಿ ಟೆಂಡರ್ ಫಾರಂ ಪಡೆಯುವ ಪ್ರಾರಂಭ ದಿನಾಂಕ & ಸ್ಥಳ : **28-01-2025** ಬೆಳಿಗ್ಗೆ 10.30 ರಿಂದ ಸಂಜೆ 05.00 ರವರೆಗೆ (ಜಂಟಿ ನಿರ್ದೇಶಕರ ಕಛೇರಿ, ಜಿಲ್ಲಾ ಕೈಗಾರಿಕಾ ಕೇಂದ್ರ, ಗದಗ) (02) ಖಾಲಿ ಟೆಂಡರ್ ಫಾರಂ ಪಡೆಯುವ ಕೊನೆಯ ದಿನಾಂಕ : **04-02-2025** ಸಂಜೆ 04.00 ರವರೆಗೆ (03) ಭರ್ತಿ ಮಾಡಿದ ಟೆಂಡರ್ ಫಾರಂ ಸಲ್ಲಿಸಲು ಕೊನೆಯ ದಿನಾಂಕ : **05-02-2025** ಮಧ್ಯಾಹ್ನ 3.00 ಘಂಟೆ (04) ತಾಂತ್ರಿಕ ಬಿಡ್ ತೆರೆಯುವ ದಿನಾಂಕ : **06-02-2025** ಬೆಳಿಗ್ಗೆ 11.00 ಘಂಟೆ (05) ಆರ್ಥಿಕ ಬಿಡ್‌ಗಳನ್ನು ತೆರೆಯುವ ದಿನಾಂಕ : **06-02-2025** ಮಧ್ಯಾಹ್ನ 12.00 ಘಂಟೆ (06) ಟೆಂಡರ್‌ನ ಒಟ್ಟು ಮೊತ್ತ ರೂ. **480000/-** (07) ಟೆಂಡರ್ ಫಾರಂ ಮೊತ್ತ (Non refundable) ರೂ. **200/-**

ಆಸಕ್ತ ಟೆಂಡರ್‌ದಾರರು ನಿಗದಿಪಡಿಸಿದ ಇ.ಎಂ.ಡಿ. ರೂ. **10000/-** ಗಳ ಮೊತ್ತವನ್ನು ಕಡ್ಡಾಯವಾಗಿ Joint Director, DIC, Gadag ಇವರ ಹೆಸರಿನಲ್ಲಿ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಡಿ.ಡಿ. ಪಡೆದು ತಾಂತ್ರಿಕ ಬಿಡ್‌ನೊಂದಿಗೆ ಟೆಂಡರ್ ಅರ್ಜಿಯ ಜೊತೆಗೆ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸುವುದು.

**ಸಹಿ/- ಜಂಟಿ ನಿರ್ದೇಶಕರು,**
ವಾಸಾಸಂಇ/ಗದಗ/ಕೆ.ಎಸ್.ಎಂ.ಸಿ.ಎ/574/2024-25 **ಜಿಲ್ಲಾ ಕೈಗಾರಿಕಾ ಕೇಂದ್ರ, ಗದಗ**


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka